ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 132 Saturday **07-11-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 132 ಶನಿವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಪಟ್ಟಣದ ಮಡಿಲಲ್ಲಿದೆ ಜೀವವೈವಿಧ್ಯದ ಕಾಡು; ಸಂರಕ್ಷಣೆಗೆ ಬೇಕಿದೆ ಕಾಳಜಿ

ನವಿಲು, ಚಿರತೆ ಸೇರಿದಂತೆ ಅಪರೂಪದ ಪ್ರಾಣಿ–ಪಕ್ಷಿಗಳ ಸಂಕಲು ಹೊಂದಿದೆ

“ಮುಂಜಾನೆಯ ಮೆರಗು”

ಜಗಳೂರು ನ, 06– ಪಟ್ಟಣದ ಕೂಗಳತೆಯಲ್ಲೇ ವಿಶಾಲವಾಗಿ ಹರಡಿಕೊಂಡಿರುವ ರಾಜ್ಯ ಅರಣ್ಯ ಪ್ರದೇಶವೊಂದು ನೂರಾರು ಬಗೆಯ ಪ್ರಾಣಿ–ಪಕ್ಷಿಗಳಿಗೆ ಆಶ್ರಯತಾಣವಾಗಿದೆ. ಪ್ರಕೃತಿಯ ಮಡಿಲಿನಂತಿರುವ ಈ ಅರಣ್ಯ ಪ್ರದೇಶದಲ್ಲಿ ಅಪರೂಪದ ವನ್ಯಜೀವಿಗಳು, ನವಿಲುಗಳು ಹಾಗೂ ವಿವಿಧ ಜಾತಿಯ ಪಕ್ಷಿಗಳ ಸಂಕುಲವಿದ್ದರೂ, ಸೂಕ್ತ ಅಭಿವೃದ್ಧಿ ಮತ್ತು ಸಂರಕ್ಷಣೆಯ ಕೊರತೆಯಿಂದಾಗಿ ಅರಣ್ಯಕ್ಕೆ ಕಾಯಕಲ್ಪದ ಅಗತ್ಯ ಎದುರಾಗಿದೆ.

ಜಗಳೂರು ಪಟ್ಟಣದಿಂದ ಲಿಂಗಣ್ಣನಹಳ್ಳಿ ರಸ್ತೆಯ ಮಾರ್ಗದಲ್ಲಿ ಕಾಣಸಿಗುವ ವಲಯ ಅರಣ್ಯ ಇಲಾಖೆ ವ್ಯಾಪ್ತಿಯ ಈ ಅರಣ್ಯ ಪ್ರದೇಶ ಸುಮಾರು 582 ಹೆಕ್ಟೇರ್ ವಿಸ್ತೀರ್ಣ ಹೊಂದಿದೆ. ಪಟ್ಟಣ–ಕ್ಕೆ ಅತ್ಯಂತ ಸಮೀಪದಲ್ಲಿರುವ ಈ ಅರಣ್ಯ ಪ್ರದೇಶದಲ್ಲಿ ನವಿಲು, ಪುರಲೆ, ಕೌಜುಗ, ಗಿಳಿಗಳು ಸೇರಿದಂತೆ ವಿವಿಧ ಜಾತಿಯ ಪಕ್ಷಿಗಳು ವಾಸವಾಗಿವೆ. ಇದರೊಂದಿಗೆ ಚಿರತೆ, ಕಾಡುಹಂದಿ, ಮುಳ್ಳುಹಂದಿ, ಪುನುಗು ಬೆಕ್ಕು, ನರಿ, ತೋಳ, ಕರಡಿ, ಆಮೆ, ಮೊಲ ಸೇರಿದಂತೆ ಹಲವು ಬಗೆಯ ವನ್ಯಜೀವಿಗಳಿವೆ. ವಿವಿಧ ಜಾತಿಯ ಹಾವುಗಳೂ ಈ ಅರಣ್ಯದ ಜೀವವೈವಿಧ್ಯತೆಯನ್ನು ಹೆಚ್ಚಿಸಿವೆ.

ಅರಣ್ಯ ಪ್ರದೇಶದಲ್ಲಿ ನೀಲಗಿರಿ, ಹೊಂಗೆ, ಮತ್ತಿ, ಉದಯ, ತಪಸಿ, ಕಾಲರಳಿ, ಗೋಣಿ, ಬಸರಿ, ತೇಗ ಸೇರಿದಂತೆ ವಿವಿಧ ಜಾತಿಯ ಗಿಡಮರಗಳು ಬೆಳೆದು ನಿಂತಿವೆ. ಹಸಿರಿನಿಂದ ಕಂಗೊಳಿಸುವ ಈ ಪ್ರದೇಶವು ವನ್ಯಜೀವಿಗಳಿಗೆ ನೈಸರ್ಗಿಕ ಆವಾಸಸ್ಥಾನವಾಗಿರುವುದರ ಜೊತೆಗೆ



ಪಟ್ಟಣದ ಪರಿಸರ ಸಮತೋಲನ ಕಾಪಾಡುವಲ್ಲಿಯೂ ಮಹತ್ವದ ಪಾತ್ರ ವಹಿಸುತ್ತಿದೆ.

ಅಭಿವೃದ್ಧಿಗೆ ಅಗತ್ಯ ಮೂಲಸೌಕರ್ಯ

ಪಟ್ಟಣದ ಸಮೀಪದಲ್ಲೇ ಇಷ್ಟು ವಿಶಾಲವಾದ ಅರಣ್ಯ ಪ್ರದೇಶವಿರುವುದು ಅಪರೂಪದ ಸಂಗತಿ. ಇಂತಹ ಅಮೂಲ್ಯ ನೈಸರ್ಗಿಕ ಸಂಪತ್ತನ್ನು ಮುಂದಿನ ಪೀಳಿಗೆಗೆ ಉಳಿಸಿಕೊಡುವ ನಿಟ್ಟಿನಲ್ಲಿ ಅರಣ್ಯ ಇಲಾಖೆ ವಿಶೇಷ ಯೋಜನೆ ರೂಪಿಸಬೇಕಿದೆ. ಅರಣ್ಯದಲ್ಲಿ ಹೊಸದಾಗಿ ಸ್ಥಳೀಯ ತಳಿಯ ಸಸಿಗಳನ್ನು ನೆಟ್ಟು ಬೆಳೆಸುವುದು, ಈಗಿರುವ ಮರಗಿಡಗಳನ್ನು ಸಂರಕ್ಷಿಸುವುದು ಹಾಗೂ ಅರಣ್ಯದ ಸುತ್ತಲೂ ಸುತ್ತುಗೋಡೆ ನಿರ್ಮಿಸುವುದರಿಂದ ಅರಣ್ಯ ಒತ್ತುವರಿ ಮತ್ತು ಅನಧಿಕೃತ ಪ್ರವೇಶವನ್ನು ನಿಯಂತ್ರಿಸಲು ಸಹಕಾರಿಯಾಗಲಿದೆ.

ಅರಣ್ಯದ ಮಧ್ಯಭಾಗದಲ್ಲಿ ವನ್ಯಜೀವಿಗಳಿಗೆ ಅನುಕೂಲವಾಗುವಂತೆ ಕೃತಕ ನೀರಿನ ತೊಟ್ಟಿಗಳನ್ನು ನಿರ್ಮಿಸಬೇಕು. ಬೇಸಿಗೆಯ ಸಂದರ್ಭದಲ್ಲಿ ನೀರಿನ ಅಭಾವ ಎದುರಾಗದಂತೆ ನಿರಂತರ ನೀರಿನ ವ್ಯವಸ್ಥೆ ಕಲ್ಪಿಸಿದರೆ ಪ್ರಾಣಿಗಳು ಕುಡಿಯುವ ನೀರಿಗಾಗಿ ಅರಣ್ಯದಿಂದ ಹೊರಬಂದು ಗ್ರಾಮಗಳತ್ತ ಅಲೆದಾಡುವುದು ತಪ್ಪಲಿದೆ. ಇದ–ರಿಂದ ಮಾನವ–ವನ್ಯಜೀವಿ ಸಂಘರ್ಷದ ಸಾಧ್ಯತೆಯನ್ನೂ ಕಡಿಮೆ ಮಾಡಬಹುದು.

ವನ್ಯಜೀವಿಗಳ ಬೇಟೆಗೆ ಕಡಿವಾಣ ಹಾಕಬೇಕಿದೆ

ಅರಣ್ಯ ಪ್ರದೇಶದಲ್ಲಿ ಮರಗಳ ಕಡಿತ ಹಾಗೂ ಅಕ್ರಮ ಚಟುವಟಿಕೆಗಳು ಕಡಿಮೆಯಾಗಬೇಕಾದರೆ ನಿರಂತರ ಗಸ್ತು ಮತ್ತು ಕಟ್ಟುನಿಟ್ಟಿನ ನಿಗಾ ಅಗತ್ಯ. ಅರಣ್ಯದಲ್ಲಿ ಪ್ರಾಣಿ–ಪಕ್ಷಿಗಳ ಬೇಟೆ ನಡೆಯುತ್ತಿರುವ ಬಗ್ಗೆ ಸಾರ್ವಜನಿಕ ವಲಯದಲ್ಲಿ ಆತಂಕ ವ್ಯಕ್ತವಾಗುತ್ತಿದೆ. ವಿಶೇಷವಾಗಿ ಯುಗಾದಿ ಸೇರಿದಂತೆ ವಿವಿಧ ಹಬ್ಬ ಹರಿದಿನಗಳ ಸಂದರ್ಭದಲ್ಲಿ ಕಾಡುಹಂದಿಗಳ ಬೇಟೆ ನಡೆಯುತ್ತಿರುವುದು ಕಂಡುಬರುತ್ತಿದೆ ಎನ್ನಲಾಗುತ್ತಿದೆ. ಅರಣ್ಯದಂಚಿನ ಗ್ರಾಮಗಳು ಹಾಗೂ



ಸುತ್ತಮುತ್ತಲಿನ ಜನವಸತಿ ಪ್ರದೇಶಗಳಲ್ಲಿ ವನ್ಯಜೀವಿ ಸಂರಕ್ಷಣೆ ಕುರಿತು ಅರಣ್ಯ ಇಲಾಖೆ ಜಾಗೃತಿ ಮೂಡಿಸಬೇಕಿದೆ.

ಸಾರ್ವಜನಿಕರ ಸಹಭಾಗಿತ್ವವೂ ಮುಖ್ಯ

ಪಟ್ಟಣದ ಸಮೀಪದಲ್ಲಿರುವ ಈ ಅರಣ್ಯ ಪ್ರದೇಶವನ್ನು ಕೇವಲ ಅರಣ್ಯ ಇಲಾಖೆಯ ಆಸ್ತಿಯೆಂದು ಪರಿಗಣಿಸದೆ, ಪಟ್ಟಣದ ಪರಿಸರ ಸಂಪತ್ತೆಂದು ಸಾರ್ವಜನಿಕರು ಭಾವಿಸಬೇಕು. ಅರಣ್ಯ ಸಂರಕ್ಷಣೆ, ವನ್ಯಜೀವಿಗಳ ರಕ್ಷಣೆ ಹಾಗೂ ಹಸಿರು ವಾತಾವರಣ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕಿದೆ ಎಂದು ಸಾಮಾಜಿಕ ಹೋರಾಟಗಾರ ರಾಘವೇಂದ್ರ ಅಭಿಪ್ರಾಯಪಡುತ್ತಾರೆ.

ಬೆಳಗಿನ ಹಕ್ಕಿಗಳ ಕಲರವ ಮನಸ್ಸಿಗೆ ಮುದ ನೀಡುತ್ತದೆ

ಮುಂಜಾನೆ ವಾಯುವಿಹಾರಕ್ಕೆ ತೆರಳುವ ಸಂದರ್ಭದಲ್ಲಿ ಅರಣ್ಯ ಪ್ರದೇಶದಿಂದ ಕೇಳಿಬರುವ ವಿವಿಧ ಜಾತಿಯ ಪಕ್ಷಿಗಳ



ಚಿಲಿಪಿಲಿ ನಾದ ಮನಸ್ಸಿಗೆ ಆಹ್ಲಾದ ನೀಡುತ್ತದೆ. ನವಿಲುಗಳು ಸೇರಿದಂತೆ ಹಲವು ಪ್ರಾಣಿ–ಪಕ್ಷಿಗಳಿರುವ ಈ ಅರಣ್ಯ ಪ್ರದೇಶ ಪ್ರಕೃತಿಯ ಸೌಂದರ್ಯವನ್ನು ಪರಿಚಯಿಸುತ್ತದೆ. ವನ್ಯಜೀವಿಗಳು ಮನುಷ್ಯರಿಗೆ ತೊಂದರೆ ನೀಡದಂತೆ ತಮ್ಮದೇ ಪರಿಸರದಲ್ಲಿ ಬದುಕುತ್ತಿವೆ. ಇಂತಹ ಅಮೂಲ್ಯ ಅರಣ್ಯವನ್ನು ಉಳಿಸಿ ಬೆಳೆಸಲು ಅರಣ್ಯ ಇಲಾಖೆಯೊಂದಿಗೆ ಸಾರ್ವಜನಿಕರೂ ಸಹಕರಿಸಬೇಕು ಎಂದು ವಾಯುವಿಹಾರಿ ಗಣೇಶ್ ಬಾಬು ಮನವಿ ಮಾಡುತ್ತಾರೆ.

ಅರಣ್ಯ ಇಲಾಖೆಯ ಸ್ಪಷ್ಟನೆ

ಪಟ್ಟಣಕ್ಕೆ ಸಮೀಪದಲ್ಲಿರುವ ಈ ಅರಣ್ಯ ಪ್ರದೇಶವನ್ನು ಸಂರಕ್ಷಿಸಲು ಇಲಾಖೆಯ ಸಿಬ್ಬಂದಿ ಹಗಲಿರುಳು ಶ್ರಮಿಸುತ್ತಿದ್ದಾರೆ. ವನ್ಯಜೀವಿಗಳ ಬೇಟೆಯಾಡುವುದು ಕಾನೂನುಬಾಹಿರವಾಗಿದ್ದು, ಇಂತಹ ಪ್ರಕರಣಗಳು ಕಂಡುಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ಕಾನೂನು ರೀತ್ಯಾ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ವಲಯ ಅರಣ್ಯಾಧಿಕಾರಿಗಳು (ಆರ್‌ಎಫ್‌ಓ) ತಿಳಿಸಿದ್ದಾರೆ.

ಒಟ್ಟಾರೆ: 582 ಹೆಕ್ಟೇರ್ ವಿಸ್ತೀರ್ಣದ ಈ ಅರಣ್ಯ ಪ್ರದೇಶ ಜಗಳೂರಿನ ಪಾಲಿಗೆ ಪ್ರಕೃತಿ ನೀಡಿರುವ ಅಮೂಲ್ಯ ಕೊಡುಗೆ. ಇದನ್ನು ಸಮರ್ಪಕವಾಗಿ ಅಭಿವೃದ್ಧಿಪಡಿಸಿ, ವನ್ಯಜೀವಿಗಳ ಸಂರಕ್ಷಣೆಗೆ ಅಗತ್ಯ ಸೌಲಭ್ಯ ಕಲ್ಪಿಸಿದರೆ ಭವಿಷ್ಯದಲ್ಲಿ ಜಗಳೂರಿನ ಪ್ರಮುಖ ಪರಿಸರ ತಾಣವಾಗಿ ರೂಪುಗೊಳ್ಳುವುದರಲ್ಲಿ ಸಂಶಯವಿಲ್ಲ. ಅರಣ್ಯ ಉಳಿದರೆ ವನ್ಯಜೀವಿಗಳು ಉಳಿಯುತ್ತವೆ; ವನ್ಯಜೀವಿಗಳು ಉಳಿದರೆ ಪರಿಸರದ ಸಮತೋಲನವೂ ಉಳಿಯುತ್ತದೆ.

ಪ್ರಾಚೀನ ಸ್ಮಾರಕಗಳ ಸಂರಕ್ಷಣೆ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿ: ಕಲ್ಲಿನಾಥ

“ಮುಂಜಾನೆಯ ಮೆರಗು”

ಜಗಳೂರು ನ, 06– ಪುರಾತನ ಸ್ಮಾರಕಗಳು, ಐತಿಹಾಸಿಕ ಅವಶೇಷಗಳು ಹಾಗೂ ಪ್ರಾಚೀನ ವಸ್ತುಗಳ ಬಗ್ಗೆ ಅರಿವು ಮತ್ತು ಜ್ಞಾನ ಹೊಂದುವುದು ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಸಹಕಾರಿಯಾಗಲಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಘಟಕದ ಕಾರ್ಯದರ್ಶಿ ಕಲ್ಲಿನಾಥ ಎ.ಎಸ್. ಹೇಳಿದರು.



ಪಟ್ಟಣದ ಮೌಲಾನಾ ಆಜಾದ್ ವಸತಿ ಶಾಲೆಯಲ್ಲಿ ಗುರುವಾರ ಆಯೋಜಿಸಿದ್ದ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಪ್ರಾಚ್ಯ ಪ್ರಜ್ಞೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ದೇಶ, ರಾಜ್ಯ ಹಾಗೂ ಸ್ಥಳೀಯ ಪ್ರದೇಶಗಳಲ್ಲಿ ಕಂಡುಬರುವ ದೇವಸ್ಥಾನಗಳು, ಶಿಲೆಗಳು, ಶಾಸನಗಳು, ನಾಣ್ಯಗಳು ಸೇರಿದಂತೆ ವಿವಿಧ ಐತಿಹಾಸಿಕ ಸ್ಮಾರಕಗಳು ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಪ್ರತೀಕಗಳಾಗಿವೆ. ಇವುಗಳ ಮಹತ್ವವನ್ನು ಅರಿತುಕೊಳ್ಳುವುದರ ಜೊತೆಗೆ ಅವುಗಳನ್ನು ಹಾಳು ಮಾಡದೆ ಸಂರಕ್ಷಿಸುವ ಮನೋಭಾವವನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿ–ದರು.

ರಾಜ್ಯ ಸಂಪನ್ಮೂಲ ವ್ಯಕ್ತಿ ಹಾಗೂ ಶಿಕ್ಷಕ ಪ್ರದೀಪ್ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಇತಿಹಾಸದ ಸ್ಮಾರಕಗಳು, ಪುರಾತನ ಅವಶೇಷಗಳು ಹಾಗೂ ಐತಿಹಾಸಿಕ ಪರಂಪರೆಯ ಕುರಿತು ಅರಿವು ಮತ್ತು ತಿಳಿವಳಿಕೆ ಮೂಡಿಸುವ ಉದ್ದೇಶದಿಂದ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಪ್ರಬಂಧ, ಚಿತ್ರಕಲೆ, ಭಾಷಣ ಹಾಗೂ ರಸಪ್ರಶ್ನೆ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ವಿತರಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಇ.ಸಿ.ಓ. ಬಸವರಾಜ್, ಶಾಲೆಯ ಪ್ರಾಂಶುಪಾಲ ಮಹಾಬಲೇಶ, ಶಾಲಾ ಶಿಕ್ಷಣ ಇಲಾಖೆ ಸಂಘದ ಅಧ್ಯಕ್ಷ ಮಂಜಪ್ಪ, ಪ್ರೌಢಶಾಲಾ ಸಹಶಿಕ್ಷಕರ ಸಂಘದ ಉಪಾಧ್ಯಕ್ಷ ಜಿ. ವೆಂಕಟೇಶ್, ಮು.ಶಿ. ಬಸವರಾಜಯ್ಯ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಎಸ್‌ಬಿಐ ಮತ್ತು ಹೆಚ್‌ಡಿಎಫ್‌ಸಿ ಬ್ಯಾಂಕ್‌ನಲ್ಲಿ ಯ್ಯಾರ್ಂಪ್ ವ್ಯವಸ್ಥೆ ಇಲ್ಲ: ವಿಕಲಚೇತನರು, ವೃದ್ಧರಿಗೆ ಸಂಕಷ್ಟ

ಜೀವಂತ ಪ್ರಮಾಣಪತ್ರ ಸಲ್ಲಿಸಲು ನಿವೃತ್ತ ನೌಕರರ ಪರದಾಟ

“ಮುಂಜಾನೆಯ ಮೆರಗು”

ಜಗಳೂರು: ಪಟ್ಟಣದ ಮರೆನಹಳ್ಳಿ ರಸ್ತೆಯಲ್ಲಿರುವ ಭಾರತೀಯ ಸ್ಟೇಟ್ ಬ್ಯಾಂಕ್ (ಎಸ್‌ಬಿಐ) ಮತ್ತು ಹೆಚ್‌ಡಿಎಫ್‌ಸಿ ಶಾಖೆಯಲ್ಲಿ ವಿಕಲಚೇತನರು ಹಾಗೂ ವಯೋವೃದ್ಧರು ಸುಗಮವಾಗಿ ಸಂಚರಿಸಲು ಅಗತ್ಯವಾದ ಯ್ಯಾರ್ಂಪ್ ವ್ಯವಸ್ಥೆ ಇಲ್ಲದಿರುವುದರಿಂದ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.

ಬ್ಯಾಂಕಿನ ದೈನಂದಿನ ವಹಿವಾಟು ಹಾಗೂ ವಿವಿಧ ಕೆಲಸ ಕಾರ್ಯಗಳಿಗಾಗಿ ಆಗಮಿಸುವ ವಿಕಲಚೇತನರು ಮತ್ತು ವಯೋವೃದ್ಧರಿಗೆ ಬ್ಯಾಂಕ್ ಕಟ್ಟಡದ ಮಹಡಿಯನ್ನು ಏರುವುದು ದೊಡ್ಡ ಸವಾಲಾಗಿದೆ. ಸಮತಟ್ಟಾದ ನೆಲದಲ್ಲಿಯೇ ಓಡಾಡಲು ಕಷ್ಟಪಡುತ್ತಿರುವ ವಿಕಲಚೇತನರು ಮೆಟ್ಟಿಲುಗಳನ್ನು ಹತ್ತಿ ಬ್ಯಾಂಕ್ ಶಾಖೆಯನ್ನು ತಲುಪುವುದು ದುಸ್ತರವಾಗಿದೆ.

ನಿಯಮಾನುಸಾರ ವಿಕಲಚೇತನರು ಹಾಗೂ ವಯೋವೃದ್ಧರು



ಸುಲಭವಾಗಿ ಬ್ಯಾಂಕ್ ಪ್ರವೇಶಿಸಲು ಅನುಕೂಲವಾಗುವಂತೆ ಯ್ಯಾರ್ಂಪ್ ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು. ಆದರೆ, ಬ್ಯಾಂಕ್ ಶಾಖೆಯನ್ನು ಮಹಡಿಯಲ್ಲಿ ಸ್ಥಳಾಂತರಿಸಿರುವುದರಿಂದ ಸಾರ್ವಜನಿಕರಿಗೆ, ಅದರಲ್ಲೂ ವಿಶೇಷಚೇತನರು ಮತ್ತು ಹಿರಿಯ ನಾಗರಿಕರಿಗೆ ಅನಗತ್ಯ ತೊಂದ–ರೆಯಾಗುತ್ತಿದೆ. ಬ್ಯಾಂಕ್ ಆಡಳಿತ ಮಂಡಳಿ ಕೂಡಲೇ ಸೂಕ್ತ ವ್ಯವಸ್ಥೆ ಕಲ್ಪಿಸಬೇಕು ಎಂದು ವಿಕಲಚೇತನರ ಸಂಘದ ರಾಜ್ಯಾಧ್ಯಕ್ಷ ಮಾಂತೇಶ್ ಬ್ರಹ್ಮ ಒತ್ತಾಯಿಸಿದ್ದಾರೆ.

ಜೀವಂತ ಪ್ರಮಾಣಪತ್ರ ಸಲ್ಲಿಸಲು ನಿವೃತ್ತರ ಪರದಾಟ

ನವೆಂಬರ್ ತಿಂಗಳಲ್ಲಿ ನಿವೃತ್ತ ನೌಕರರು ಪಿಂಚಣಿ ಮುಂದುವರಿಸಲು ಅಗತ್ಯವಾದ ಜೀವಂತ ಪ್ರಮಾಣಪತ್ರ ಸಲ್ಲಿಸಬೇಕಿದ್ದು, ಬ್ಯಾಂಕ್ ಶಾಖೆಯಲ್ಲಿನ ಸೂಕ್ತ ಪ್ರವೇಶ ವ್ಯವಸ್ಥೆಯ ಕೊರತೆಯಿಂದ ಹಿರಿಯ ನಾಗರಿಕರು ಹರಸಾಹಸ ಪಡುವಂತಾಗಿದೆ. ವಯೋಸಹಜ ಕಾಯಿಲೆಗಳಿಂದ ಬಳಲುತ್ತಿರುವ ನಿವೃತ್ತ ನೌಕರರು ಮೆಟ್ಟಿಲುಗಳನ್ನು ಹತ್ತಿ ಬ್ಯಾಂಕ್‌ಗೆ ತೆರಳಲು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ನಿವೃತ್ತ ನೌಕರ ತಿಪ್ಪೇಸ್ವಾಮಿ ತಿಳಿಸಿದ್ದಾರೆ.

ಸಂಬಂಧಪಟ್ಟ ಬ್ಯಾಂಕ್ ಅಧಿಕಾರಿಗಳು ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ವಿಕಲಚೇತನರು, ವಯೋವೃದ್ಧರು ಹಾಗೂ ನಿವೃತ್ತ ನೌಕರರಿಗೆ ಅನುಕೂಲವಾಗುವಂತೆ ಯ್ಯಾರ್ಂಪ್ ವ್ಯವಸ್ಥೆ ಅಥವಾ ಪರ್ಯಾಯ ಸುಗಮ ಪ್ರವೇಶ ವ್ಯವಸ್ಥೆ ಕಲ್ಪಿಸಬೇಕು ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.

ಜಗಳೂರು ಪಟ್ಟಣದ ದೊಡ್ಡಮಾರಮ್ಮ ದೇವಿಗೆ ವಿಶೇಷ ಪುಷ್ಪಾಲಂಕಾರ

“ಮುಂಜಾನೆಯ ಮೆರಗು”

ಜಗಳೂರು: ಪಟ್ಟಣದ ಹೊರಕೆರೆಯಲ್ಲಿರುವ ದೊಡ್ಡಮಾರಮ್ಮ ದೇವಿಗೆ ಶುಕ್ರವಾರ ವಿಶೇಷ ಪುಷ್ಪಾಲಂಕಾರ ಮಾಡಲಾಗಿದ್ದು, ದೇವಿಯ ದರ್ಶನಕ್ಕೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಪೂಜೆ ಸಲ್ಲಿಸಿದರು.

ಕಳೆದ ಕೆಲವು ದಿನಗಳಿಂದ ಮಕ್ಕಳಿಗೆ ಅಮ್ಮನ ಸನ್ನಿಧಿಯಲ್ಲಿ ದೇವಿಯ ದರ್ಶನವಾಗುತ್ತಿದೆ ಎಂಬ ನಂಬಿಕೆ ಭಕ್ತರಲ್ಲಿ ಮೂಡಿರುವ ಹಿನ್ನೆಲೆಯಲ್ಲಿ ದೇವಸ್ಥಾನಕ್ಕೆ ಆಗಮಿಸುವ ಭಕ್ತರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಭಕ್ತರು ದೇವಿಗೆ ವಿಶೇಷ ಪೂಜೆ ಸಲ್ಲಿಸಿ, ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥಿಸುತ್ತಿದ್ದಾರೆ.



ಹಾಲಿನ ದರ ಏರಿಕೆ: ತಳ್ಳುಗಾಡಿ, ಬೀದಿಬದಿ ಟೀ ಅಂಗಡಿಗಳಿಗೆ ಸಂಕಷ್ಟ

“ಮುಂಜಾನೆಯ ಮೆರಗು”

ಜಗಳೂರು ನ, 06– ಹಾಲಿನ ದರ ಏರಿಕೆಯ ಬಿಸಿ ಇದೀಗ ತಳ್ಳುಗಾಡಿ ವ್ಯಾಪಾರಿಗಳು ಹಾಗೂ ಬೀದಿಬದಿಯ ಸಣ್ಣ ಟೀ ಹೋಟೆಲ್‌ಗಳಿಗೂ ತಟ್ಟಿದ್ದು, ಚಿಕ್ಕಪುಟ್ಟ ವ್ಯಾಪಾರಸ್ಥರು ಜೀವನ ನಿರ್ವಹಣೆ ಮಾಡುವುದು ಕಷ್ಟಕರವಾಗಿದೆ.

ಪಟ್ಟಣದ ಬೀದಿಬದಿಯ ಟೀ ಅಂಗಡಿಗಳು, ತಳ್ಳುಗಾಡಿಗಳು ಹಾಗೂ ಸಣ್ಣ ಹೋಟೆಲ್‌ಗಳು ನೂರಾರು ಕೂಲಿ ಕಾರ್ಮಿಕರು, ಕಟ್ಟಡ ಕಾರ್ಮಿಕರು, ಆಟೋ ಚಾಲಕರು ಸೇರಿದಂತೆ ದಿನನಿತ್ಯ ದುಡಿದು ಜೀವನ ಸಾಗಿಸುವ ಸಾಮಾನ್ಯ ಜನರಿಗೆ ಕಡಿಮೆ ದರದಲ್ಲಿ ಚಹಾ ಒದಗಿಸುವ ಪ್ರಮುಖ ಸ್ಥಳಗಳಾಗಿವೆ. ಆದರೆ ಇತ್ತೀಚಿನ ಹಾಲಿನ ದರ ಏರಿಕೆಯಿಂದಾಗಿ ಈ ಸಣ್ಣ ವ್ಯಾಪಾರಿಗಳ ಲಾಭದ ಪ್ರಮಾಣ ಗಣನೀಯವಾಗಿ ಕಡಿಮೆಯಾಗುತ್ತಿದೆ.

ಸಾಮಾನ್ಯವಾಗಿ ಬೀದಿಬದಿಯ ಟೀ ಅಂಗಡಿಗಳಲ್ಲಿ ಕೂಲಿ ಕಾರ್ಮಿಕರು ಮತ್ತು ವಿವಿಧ ಕೆಲಸಗಳಿಗೆ ತೆರಳುವವರು ಬೆಳಿಗ್ಗೆ ಹಾಗೂ ಸಂಜೆ ಚಹಾ ಸೇವಿಸಲು ಬರುತ್ತಾರೆ. ಈ ಹಿಂದೆ ಐದು ರೂಪಾಯಿಗೆ ದೊರೆಯುತ್ತಿದ್ದ ಒಂದು ಕಪ್ ಚಹಾದ ಬೆಲೆಯನ್ನು ಇದೀಗ ಎಂಟರಿಂದ ಹತ್ತು ರೂಪಾಯಿಗೆ ಹೆಚ್ಚಿಸುವ ಅನಿವಾರ್ಯತೆ ಎದುರಾಗಿದೆ. ಆದರೆ ದರ ಹೆಚ್ಚಿಸಿದರೆ ಗ್ರಾಹಕರು ಚಹಾ ಕುಡಿಯುವುದನ್ನೇ ಕಡಿಮೆ ಮಾಡುತ್ತಾರೆ ಅಥವಾ ಅಂಗಡಿಯಿಂದ ಹಿಂದಿರುಗುತ್ತಾರೆ. ದರ ಹೆಚ್ಚಿಸದಿದ್ದರೆ ವ್ಯಾಪಾರಿಗಳಿಗೆ ನಷ್ಟವಾಗುವ ಪರಿಸ್ಥಿತಿ ನಿರ್ಮಾಣವಾಗಿದೆ.

ಸರ್ಕಾರ ಹಾಲಿನ ದರ ಹೆಚ್ಚಿಸಿರುವುದರಿಂದ ಚಹಾ ತಯಾರಿಕೆಯ ವೆಚ್ಚವೂ ಹೆಚ್ಚಾಗಿದೆ. ಹಾಲು, ಸಕ್ಕರೆ, ಚಹಾ ಪುಡಿ, ಅಡುಗೆ ಅನಿಲ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುತ್ತಿರುವುದು ಸಣ್ಣ ವ್ಯಾಪಾರಿಗಳ ಆದಾಯದ ಮೇಲೆ ಪರಿಣಾಮ ಬೀರುತ್ತಿದೆ. ಒಂದು ಕಡೆ ಅಡುಗೆ ಅನಿಲದ ಲಭ್ಯತೆಯ ಸಮಸ್ಯೆ, ಮತ್ತೊಂದು ಕಡೆ

ದಾವಣಗೆರೆ ರೈತರ ಬೆಳೆಗಳಿಗೆ ನೀರು ಒದಗಿಸಲು ಸಿಎಂಗೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಮನವಿ

ರೈತರ ಬೆಳೆಗಳ ರಕ್ಷಣೆಗೆ ಭದ್ರಾ ನೀರು ಬಳಕೆಯಲ್ಲಿ ಆದ್ಯತೆ ನೀಡುವಂತೆ ಒತ್ತಾಯ

"ಮುಂಜಾನೆಯ ಮೆರಗು"

ದಾವಣಗೆರೆ ನ, 06– ಭದ್ರಾ ಜಲಾಶಯವನ್ನು ಅವಲಂಬಿಸಿ ಕೃಷಿ ಮಾಡುತ್ತಿರುವ ದಾವಣಗೆರೆ ಜಿಲ್ಲೆಯ ರೈತರಿಗೆ ಸಮರ್ಪಕವಾಗಿ ನೀರು ಲಭ್ಯವಾಗದ ಹಿನ್ನೆಲೆಯಲ್ಲಿ, ರೈತರ ಬೆಳೆಗಳನ್ನು ರಕ್ಷಿಸಲು ತಕ್ಷಣ ಅಗತ್ಯ ಕ್ರಮ ಕೈಗೊಳ್ಳುವಂತೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದ್ದಾರೆ.

ಬೆಂಗಳೂರಿನಲ್ಲಿ ಜಿಲ್ಲೆಯ ರೈತರ ನಿಯೋಗದೊಂದಿಗೆ ಮುಖ್ಯಮಂತ್ರಿಗಳನ್ನು ಭೇಟಿಯಾದ ಸಚಿವರು, ಭದ್ರಾ ಜಲಾಶಯದ ನೀರಿನ ಹಂಚಿಕೆಯಲ್ಲಿ ದಾವಣಗೆರೆ ಜಿಲ್ಲೆಯ ರೈತರ ಕೃಷಿ ಚಟುವಟಿಕೆಗಳಿಗೆ ಆದ್ಯತೆ ನೀಡುವಂತೆ ಮನವಿ ಮಾಡಿದರು.

ದಾವಣಗೆರೆ ಜಿಲ್ಲೆಯ ಬಹುತೇಕ ಕೃಷಿ ಪ್ರದೇಶಗಳಲ್ಲಿ ರೈತರು ಭದ್ರಾ ಜಲಾಶಯದ ನೀರನ್ನೇ ನಂಬಿ ಬೆಳೆಗಳನ್ನು ಬೆಳೆದಿದ್ದಾರೆ. ಬಿತ್ತನೆ ಕಾರ್ಯ ಪೂರ್ಣಗೊಳಿಸಿ ಬೆಳೆಗಳ ಬೆಳವಣಿಗೆಯ ಹಂತದಲ್ಲಿರುವ ಸಂದರ್ಭದಲ್ಲಿ ಅಗತ್ಯ ಪ್ರಮಾಣದ ನೀರು ದೊರೆಯದಿರುವುದು ರೈತರಲ್ಲಿ ಆತಂಕ ಮೂಡಿಸಿದೆ. ಈಗಾಗಲೇ ನೀರಿನ



ಕೊರತೆಯಿಂದಾಗಿ ಬೆಳೆಗಳಿಗೆ ತೊಂದರೆಯಾಗುತ್ತಿದ್ದು, ಮುಂದಿನ ದಿನಗಳಲ್ಲಿಯೂ ಸಮರ್ಪಕ ನೀರು ಹರಿಯದಿದ್ದರೆ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆಯಿದೆ.

ಜಿಲ್ಲೆಯ ರೈತರು ವರ್ಷಪೂರ್ತಿ ಕೃಷಿಯನ್ನೇ ಅವಲಂಬಿಸಿ ಜೀವನ ನಡೆಸುತ್ತಿದ್ದು, ಬೆಳೆಗಳಿಗೆ ನೀರು ದೊರೆಯದಿದ್ದರೆ ಕೃಷಿಗೆ ಮಾಡಿದ ಹೂಡಿಕೆಯೂ ನಷ್ಟವಾಗುವ ಪರಿಸ್ಥಿತಿ ನಿರ್ಮಾಣವಾಗಲಿದೆ. ಆದ್ದರಿಂದ ಭದ್ರಾ ಜಲಾಶಯದ ನೀರಿನ ಲಭ್ಯತೆ ಹಾಗೂ ಹಂಚಿಕೆ ಕುರಿತು ಸರ್ಕಾರ ತುರ್ತು ಗಮನಹರಿಸಬೇಕೆಂದು ಸಚಿವರು ಮುಖ್ಯಮಂತ್ರಿಗಳಲ್ಲಿ ಕೋರಿದರು.

ಪ್ರಸ್ತುತ ಭದ್ರಾ ನಾಲೆಯ ಮೂಲಕ ಚಿತ್ರದುರ್ಗ ಜಿಲ್ಲೆಯ ಭದ್ರಾ ಮೇಲ್ದಂಡೆ ಯೋಜನೆಗೆ ನೀರು ಹರಿಸಲಾಗುತ್ತಿದೆ. ಈ ನೀರನ್ನು ತಾತ್ಕಾಲಿಕವಾಗಿ ತಡೆಹಿಡಿದು, ದಾವಣಗೆರೆ ಜಿಲ್ಲೆಯ ರೈತರ ಬೆಳೆಗಳನ್ನು ಉಳಿಸಿಕೊಳ್ಳಲು ಅಗತ್ಯವಿರುವ ನೀರನ್ನು ಆದ್ಯತೆಯ ಮೇರೆಗೆ ಒದಗಿಸಬೇಕು ಎಂಬುದು ನಿಯೋಗದ ಪ್ರಮುಖ ಬೇಡಿಕೆಯಾಗಿದೆ.

ನೀರಿನ ಹಂಚಿಕೆಯಲ್ಲಿ ರೈತರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು, ಬೆಳೆಗಳಿಗೆ ಅಗತ್ಯವಿರುವ ನೀರನ್ನು ಸಮರ್ಪಕವಾಗಿ ಪೂರೈಸಲು ಕ್ರಮ ಕೈಗೊಳ್ಳಬೇಕು. ಈ ಕುರಿತು ಸಂಬಂಧಪಟ್ಟ ನೀರಾವರಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿ, ಸಮಸ್ಯೆಗೆ ಶೀಘ್ರ ಪರಿಹಾರ ಕಲ್ಪಿಸಬೇಕೆಂದು ಮನವಿ ಮಾಡಲಾಯಿತು.

ಭದ್ರಾ ಅಚ್ಚುಕಟ್ಟು ಪ್ರದೇಶದ ರೈತರ ಕೃಷಿ ಹಿತಾಸಕ್ತಿ ಕಾಪಾಡುವುದು, ಬೆಳೆ ನಷ್ಟವನ್ನು ತಡೆಗಟ್ಟುವುದು ಹಾಗೂ ಲಭ್ಯವಿರುವ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳುವುದು ಸರ್ಕಾರದ ಮುಂದಿರುವ ಪ್ರಮುಖ ಜವಾಬ್ದಾರಿಯಾಗಿದೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ರೈತರ ಮನವಿಗೆ ಸ್ಪಂದಿಸಿ ಸೂಕ್ತ ನಿರ್ಧಾರ ಕೈಗೊಳ್ಳುವ ನಿರೀಕ್ಷೆಯನ್ನು ರೈತ ಮುಖಂಡರು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡ ತೇಜಸ್ವಿ ಪಟೇಲ್ ಸೇರಿದಂತೆ ದಾವಣಗೆರೆ ಜಿಲ್ಲೆಯ ವಿವಿಧ ಭಾಗಗಳ ರೈತ ಮುಖಂಡರು ಹಾಗೂ ರೈತರು ಉಪಸ್ಥಿತರಿದ್ದು, ಜಿಲ್ಲೆಯ ಕೃಷಿ ಮತ್ತು ನೀರಾವರಿ ಸಮಸ್ಯೆಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದರು.

ಗಣಿ ಬಾಧಿತ ಕುಟುಂಬಗಳಿಗೆ ತಕ್ಷಣ ಪುನರ್ವಸತಿ

ಕಲ್ಪಿಸಿ: ಡಾ. ನಾಗಲಕ್ಷ್ಮೀ ಚೌಧರಿ

"ಮುಂಜಾನೆಯ ಮೆರಗು"

ವಿಜಯನಗರ ನ, 06– ಜಿಲ್ಲೆಯ ದಾಲ್ಮಿಯಾ ಕ್ಯಾಂಪ್‌ನ ಗಣಿ ಬಾಧಿತ ಮಹಿಳೆಯರ ಶಿಬಿರಕ್ಕೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಭೇಟಿ ನೀಡಿ, ಅಲ್ಲಿನ ಮಹಿಳೆಯರು ಹಾಗೂ ಕುಟುಂಬಗಳ ಸ್ಥಿತಿಗತಿಗಳನ್ನು ಪರಿಶೀಲಿಸಿದರು. ಈ ವೇಳೆ ನಿವಾಸಿಗಳ ಸಮಸ್ಯೆಗಳನ್ನು ಆಲಿಸಿ, ಅವರ ಸಂಕಷ್ಟಗಳಿಗೆ ಸ್ಪಂದಿಸಿದರು.



ಹಲವು ವರ್ಷಗಳಿಂದ ಈ ಪ್ರದೇಶದಲ್ಲಿ ನೆಲೆಸಿರುವ ಗಣಿ ಬಾಧಿತ ಕುಟುಂಬಗಳು ಇಂದಿಗೂ ಅಗತ್ಯ ಮೂಲಸೌಕರ್ಯಗಳಿಲ್ಲದೆ ಜೀವನ ನಡೆಸುತ್ತಿರುವುದು ನೋವುಂಟುಮಾಡಿದೆ ಎಂದು ಅವರು ಹೇಳಿದರು.

ಶಿಬಿರದಲ್ಲಿ ಉತ್ತಮ ರಸ್ತೆ, ಒಳಚರಂಡಿ ವ್ಯವಸ್ಥೆ, ಸುಸಜ್ಜಿತ ಮನೆಗಳು ಹಾಗೂ ಅಗತ್ಯ ವೈದ್ಯಕೀಯ ಸೇವೆಗಳ ಕೊರತೆಯಿದೆ. ಯಾವುದೇ ಅಗತ್ಯ ಸೌಲಭ್ಯ ಅಥವಾ ಸೇವೆ ಪಡೆಯಲು ರೈಲ್ವೆಹಳಿಯನ್ನು ದಾಟಿ ಮತ್ತೊಂದು ಕಡೆಗೆ ತೆರಳಬೇಕಾದ ಅನಿವಾರ್ಯತೆ ಇಲ್ಲಿನ ಜನರಿಗಿದೆ. ಮಹಿಳೆಯರು, ಮಕ್ಕಳು ಮತ್ತು ವೃದ್ಧರು ಇಂತಹ ಅಪಾಯಕಾರಿ ಪರಿಸ್ಥಿತಿಯಲ್ಲಿ ಬದುಕುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ ಎಂದು ತಿಳಿಸಿದರು.

ಗಣಿ ಬಾಧಿತ ಕುಟುಂಬಗಳಿಗೆ ಸುರಕ್ಷಿತ ವಸತಿ ಹಾಗೂ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವ ಮೂಲಕ ಗೌರವಯುತ ಬದುಕು ಕಲ್ಪಿಸಬೇಕು. ಈ ನಿಟ್ಟಿನಲ್ಲಿ ತಕ್ಷಣ ಸೂಕ್ತ ಪುನರ್ವಸತಿ ವ್ಯವಸ್ಥೆ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಜನರ ಜೀವ ಮತ್ತು ಸುರಕ್ಷತೆಯ ವಿಚಾರದಲ್ಲಿ ಯಾವುದೇ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು ಎಂದು ಡಾ. ನಾಗಲಕ್ಷ್ಮೀ ಚೌಧರಿ ಹೇಳಿದರು.

ದೇವರಬೆಳಕೆರೆ, ಭೈರನಪಾದ ಏತ ನೀರಾವರಿ ಯೋಜನೆಗಳಿಗೆ ತಕ್ಷಣ ಮಂಜೂರಾತಿ ನೀಡಿ

ಸಿಎಂಗೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಮನವಿ

"ಮುಂಜಾನೆಯ ಮೆರಗು"

ದಾವಣಗೆರೆ ನ, 06– ಜಿಲ್ಲೆಯ ಹರಿಹರ ತಾಲೂಕಿನ ರೈತರ ಬಹುದಿನಗಳ ನೀರಾವರಿ ಬೇಡಿಕೆಗೆ ಸ್ಪಂದಿಸುವ ನಿಟ್ಟಿನಲ್ಲಿ ದೇವರಬೆಳಕೆರೆ ಏತ ನೀರಾವರಿ ಯೋಜನೆ ಹಾಗೂ ಭದ್ರಾ ಅಚ್ಚುಕಟ್ಟು ಪ್ರದೇಶದ ರೈತರಿಗೆ ಅನುಕೂಲ ಕಲ್ಪಿಸುವ ಭೈರನಪಾದ ಏತ ನೀರಾವರಿ ಯೋಜನೆಗಳಿಗೆ ತಕ್ಷಣ ಮಂಜೂರಾತಿ ನೀಡಿ, ಅನುದಾನ ಬಿಡುಗಡೆ ಮಾಡುವಂತೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದರು.

ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಅವರನ್ನು ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅವರ ನೇತೃತ್ವದ ರೈತರ ನಿಯೋಗ ಭೇಟಿ ಮಾಡಿ, ಹರಿಹರ ತಾಲೂಕಿನ ಕೃಷಿ ಮತ್ತು ನೀರಾವರಿ ಸಮಸ್ಯೆಗಳ ಕುರಿತು ಚರ್ಚಿಸಿತು. ಈ ಸಂದರ್ಭದಲ್ಲಿ ಎರಡು ಮಹತ್ವದ ಏತ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿಗಳ ಗಮನ ಸೆಳೆಯಲಾಯಿತು.

ಹರಿಹರ ತಾಲೂಕಿನ ದೇವರಬೆಳಕೆರೆ ಭಾಗದ ರೈತರ ಜಮೀನುಗಳಿಗೆ ತುಂಗಭದ್ರಾ ನದಿಯಿಂದ ನೀರು ತುಂಬಿಸುವ ಉದ್ದೇಶದಿಂದ ಸುಮಾರು 75 ಕೋಟಿ ಅಂದಾಜು ವೆಚ್ಚದಲ್ಲಿ ಏತ ನೀರಾವರಿ ಯೋಜನೆ ರೂಪಿಸಲಾಗಿದೆ. ಈ ಯೋಜನೆ ಅನುಷ್ಠಾನಗೊಂಡರೆ ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ರೈತರಿಗೆ ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ನೀರಾವರಿ ಸೌಲಭ್ಯ ದೊರೆಯಲಿದೆ. ಮಳೆಯನ್ನೇ ಅವಲಂಬಿಸಿ ಕೃಷಿ ಮಾಡುತ್ತಿರುವ ರೈತರಿಗೆ ಇದರಿಂದ ಅನುಕೂಲವಾಗಲಿದ್ದು, ಕೃಷಿ ಉತ್ಪಾದನೆ ಹೆಚ್ಚಿಸಲು ಸಹಕಾರಿಯಾಗಲಿದೆ.

ಭದ್ರಾ ಅಚ್ಚುಕಟ್ಟು ಪ್ರದೇಶದ ನೀರಾವರಿ ಸೌಲಭ್ಯದಿಂದ ವಂಚಿತವಾಗಿರುವ ಬಾಧಿತ ಪ್ರದೇಶಗಳಿಗೆ ನೀರು ಒದಗಿಸುವ ಉದ್ದೇಶದಿಂದ ಸುಮಾರು 136 ಕೋಟಿ ಅಂದಾಜು ವೆಚ್ಚದಲ್ಲಿ ಭೈರನಪಾದ ಏತ ನೀರಾವರಿ ಯೋಜನೆ ಪ್ರಸ್ತಾಪಿಸಲಾಗಿದೆ.

ಈ ಯೋಜನೆಯಡಿ ತುಂಗಭದ್ರಾ ನದಿಯಿಂದ ನೀರನ್ನು ಎತ್ತಿ ಒಟ್ಟು 1,632 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ಗುರಿ ಹೊಂದಲಾಗಿದೆ. ಇದರೊಂದಿಗೆ ಆ ಭಾಗದ ಆರು ಪ್ರಮುಖ ಕೆರೆಗಳನ್ನು ತುಂಬಿಸುವ ಯೋಜನೆಯೂ ರೂಪಿಸಲಾಗಿದೆ. ಕೆರೆಗಳಿಗೆ ನೀರು ಹರಿಸುವುದರಿಂದ ಅಂತರ್ಜಲ ಮಟ್ಟ



ಸುಧಾರಣೆಯಾಗುವುದರ ಜೊತೆಗೆ ಸುತ್ತಮುತ್ತಲಿನ ಗ್ರಾಮಗಳ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗಲಿದೆ ಎಂಬ ನಿರೀಕ್ಷೆಯಿದೆ.

ಈ ಎರಡೂ ಯೋಜನೆಗಳು ಹರಿಹರ ತಾಲೂಕಿನ ರೈತರ ಪಾಲಿಗೆ ಮಹತ್ವದ್ದಾಗಿದ್ದು, ಯೋಜನೆಗಳ ಅನುಷ್ಠಾನ ವಿಳಂಬವಾಗದಂತೆ ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಸಚಿವರು ಹಾಗೂ ರೈತರ ನಿಯೋಗ ಒತ್ತಾಯಿಸಿತು.

ಎರಡೂ ಯೋಜನೆಗಳಿಗೆ ತಕ್ಷಣ ಆಡಳಿತಾತ್ಮಕ ಮಂಜೂರಾತಿ ನೀಡುವುದು, ಅಗತ್ಯ ಅನುದಾನ ಬಿಡುಗಡೆ ಮಾಡುವುದು ಹಾಗೂ ಕಾಮಗಾರಿಗಳ ಅನುಷ್ಠಾನದ ಜವಾಬ್ದಾರಿಯನ್ನು ಕರ್ನಾಟಕ ನೀರಾವರಿ ನಿಗಮ ನಿಯಮಿತಕ್ಕೆ ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಲಾಯಿತು.

ಪರಿಶಿಷ್ಟ ಪಂಗಡದ ರೈತರ ಆರ್ಥಿಕ

ಸ್ವಾವಲಂಬನೆಗೆ ಸರ್ಕಾರ ಬದ್ಧ: ರಘುಮೂರ್ತಿ

"ಮುಂಜಾನೆಯ ಮೆರಗು"

ಚಳ್ಳಕೆರೆ ನ, 06– ಪರಿಶಿಷ್ಟ ಪಂಗಡದ ರೈತ ಕುಟುಂಬಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸಿ, ಕೃಷಿ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ವತಿಯಿಂದ ಗಂಗಾ ಕಲ್ಯಾಣ ಯೋಜನೆಯಡಿ ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಪಂಪ್‌ಸೆಟ್ ಹಾಗೂ ಇತರೆ ಪೂರಕ ಸಾಮಗ್ರಿಗಳನ್ನು ಸಚಿವ ಟಿ.ರಘುಮೂರ್ತಿ ವಿತರಿಸಿದರು.



ನಗರದ ಶಾಸಕರ ಭವನದ ಮುಂಭಾಗದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಫಲಾನುಭವಿಗಳಿಗೆ ಪಂಪ್‌ಸೆಟ್‌ಗಳನ್ನು ವಿತರಿಸಿ ಮಾತನಾಡಿದ ಅವರು, ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳು ತಲುಪಬೇಕು ಎಂಬ ಆಶಯದೊಂದಿಗೆ ಪರಿಶಿಷ್ಟ ಪಂಗಡಗಳ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು.

ಗಂಗಾ ಕಲ್ಯಾಣ ಯೋಜನೆಯು ಪರಿಶಿಷ್ಟ ಪಂಗಡದ ರೈತ ಕುಟುಂಬಗಳ ಕೃಷಿ ಬದುಕಿಗೆ ಆಸರೆಯಾಗುವ ಮಹತ್ವದ ಯೋಜನೆಯಾಗಿದೆ. ಈ ಯೋಜನೆಯಡಿ ನೀರಾವರಿ ಸೌಲಭ್ಯ ದೊರೆಯುವುದರಿಂದ ರೈತರು ಕೃಷಿ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಕೈಗೊಳ್ಳಲು ಸಾಧ್ಯವಾಗಲಿದೆ. ಇದರಿಂದ ಕೃಷಿ ಉತ್ಪಾದನೆ ಹೆಚ್ಚಿಸುವುದರ ಜತೆಗೆ ರೈತ ಕುಟುಂಬಗಳು ಆರ್ಥಿಕವಾಗಿ ಸ್ವಾವಲಂಬಿಗಳಾಗಲು ಅನುಕೂಲವಾಗಲಿದೆ ಎಂದರು.

ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪುವ ಮೂಲಕ ಅವರ ಜೀವನಮಟ್ಟ ಸುಧಾರಿಸಬೇಕು. ರೈತರು ದೊರೆತ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಕೃಷಿಯಲ್ಲಿ ಪ್ರಗತಿ ಸಾಧಿಸಬೇಕು ಎಂದು ಸಚಿವರು ಆಶಯ ವ್ಯಕ್ತಪಡಿಸಿದರು.

ಚಳ್ಳಕೆರೆಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಫಲಾನುಭವಿಗಳು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಆರೋಗ್ಯ ಸೇವೆಗಳ ಸುಧಾರಣೆಗೆ ಆದ್ಯತೆ: 1,000 ಸಿಬ್ಬಂದಿ ನೇಮಕಾತಿ ಶೀಘ್ರ ಪೂರ್ಣ: ಯು.ಟಿ.ಖಾದರ್

"ಮುಂಜಾನೆಯ ಮೆರಗು"

ಚಿತ್ರದುರ್ಗ ನ, 06– ಜಿಲ್ಲೆಯ ಆರೋಗ್ಯ ಇಲಾಖೆಯ ಕಾರ್ಯನಿರ್ವಹಣೆ, ವೈದ್ಯಕೀಯ ಸೇವೆಗಳ ಗುಣಮಟ್ಟ ಹಾಗೂ ಆರೋಗ್ಯ ಸೂಚಕಗಳ ಪ್ರಗತಿಯನ್ನು ಪರಿಶೀಲಿಸುವ ನಿಟ್ಟಿನಲ್ಲಿ ವಿಧಾನಸಭಾಧ್ಯಕ್ಷ ಹಾಗೂ ಸಚಿವ ಯು.ಟಿ.ಖಾದರ್ ಅವರು ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಸಭೆಯಲ್ಲಿ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸೇರಿದಂತೆ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು, ನರ್ಸ್‌ಗಳು ಹಾಗೂ ಇತರೆ ವೈದ್ಯಕೀಯ ಸಿಬ್ಬಂದಿಯ ಕೊರತೆ, ತುರ್ತು ಆರೋಗ್ಯ ಸೇವೆಗಳ ಲಭ್ಯತೆ ಮತ್ತು ಸಾರ್ವಜನಿಕರಿಗೆ ದೊರೆಯುತ್ತಿರುವ ಚಿಕಿತ್ಸಾ ಸೌಲಭ್ಯಗಳ ಕುರಿತು ಸಮಗ್ರವಾಗಿ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಯು.ಟಿ.ಖಾದರ್, ಆರೋಗ್ಯ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸಲು ಸರ್ಕಾರ ಹಲವು ಮಹತ್ವದ ಕ್ರಮಗಳನ್ನು ಕೈಗೊಂಡಿದೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ಪ್ರಾದೇಶಿಕ ಮಟ್ಟದಲ್ಲಿ ನೇಮಕಾತಿ ಪ್ರಕ್ರಿಯೆ ಆರಂಭಿಸಲಾಗಿದೆ. ಸಚಿವ ಸಂಪುಟದ ಒಪ್ಪಿಗೆಯಂತೆ 1,000 ಸಿಬ್ಬಂದಿಗಳ ಒನ್‌ಟೈಮ್ ನೇಮಕಾತಿ ಪ್ರಕ್ರಿಯೆಯನ್ನು ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.



ತುರ್ತು ಆರೋಗ್ಯ ಸೇವೆಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ಉದ್ದೇಶದಿಂದ ರಾಜ್ಯಾದ್ಯಂತ 800 ಹೊಸ ಆಂಬುಲೆನ್ಸ್‌ಗಳನ್ನು ಸೇರ್ಪಡೆಗೊಳಿಸಲಾಗುತ್ತಿದೆ. ಗ್ರಾಮೀಣ ಪ್ರದೇಶಗಳಲ್ಲಿ ತುರ್ತು ಸಂದರ್ಭದಲ್ಲಿ 20 ನಿಮಿಷಗಳೊಳಗೆ ಆಂಬುಲೆನ್ಸ್ ತಲುಪುವಂತೆ ಜಿಪಿಎಸ್ ಆಧಾರಿತ ಟ್ರ್ಯಾಕಿಂಗ್ ವ್ಯವಸ್ಥೆ ಜಾರಿಗೆ ತರಲಾಗಿದ್ದು, ನಿಗದಿತ ಸಮಯದಲ್ಲಿ ಸೇವೆ ಒದಗಿಸಲು ವಿಫಲವಾದಲ್ಲಿ ದಂಡ ವಿಧಿಸುವ ಕಟ್ಟುನಿಟ್ಟಿನ ನಿಯಮಗಳನ್ನು ರೂಪಿಸಲಾಗಿದೆ ಎಂದರು.

ಇದಲ್ಲದೆ, ಸಾರ್ವಜನಿಕರಿಗೆ ಸುಲಭವಾಗಿ ಮತ್ತು ಗುಣಮಟ್ಟದ ಆರೋಗ್ಯ ಸೇವೆ ದೊರೆಯುವಂತೆ ಪ್ರತಿ ಜಿಲ್ಲೆಯಲ್ಲೂ ಪ್ರತ್ಯೇಕ ಸುಸಜ್ಜಿತ ಜಿಲ್ಲಾ ಆಸ್ಪತ್ರೆ ನಿರ್ಮಾಣಕ್ಕೆ ಸರ್ಕಾರ ಕ್ರಮ ಕೈಗೊಂಡಿದೆ. ವಕ್ಫ್ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೂಲಕ ವಿದ್ಯಾರ್ಥಿಗಳಿಗೆ 540 ಕೋಟಿ ರೂ. ಮೊತ್ತದ ವಿದ್ಯಾರ್ಥಿವೇತನ ತಲುಪಿಸಲಾಗುತ್ತಿದೆ ಎಂದು ವಿವರಿಸಿದರು.

ಸರ್ಕಾರಿ ಆಸ್ಪತ್ರೆಗಳಿಗೆ ಬರುವ ರೋಗಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಗುಣಮಟ್ಟದ ಚಿಕಿತ್ಸೆ, ಅಗತ್ಯ ಔಷಧಗಳು ಹಾಗೂ ವೈದ್ಯಕೀಯ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸಬೇಕು. ಆರೋಗ್ಯ ಇಲಾಖೆಯ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ (ಪಪ್ಪಿ), ಜಿಲ್ಲಾಧಿಕಾರಿ ಟಿ.ಎನ್. ರಮ್ಯಾ ಸೇರಿದಂತೆ ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳು, ಸಾರ್ವಜನಿಕರ ಅನುಕೂಲಕ್ಕಾಗಿ

ನೂತನ ಕೆಎಸ್‌ಆರ್‌ಟಿಸಿ ಬಸ್ ಸಂಚಾರಕ್ಕೆ ಚಾಲನೆ

"ಮುಂಜಾನೆಯ ಮೆರಗು"

ದಾವಣಗೆರೆ ನ, 06– ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರ ದೈನಂದಿನ ಪ್ರಯಾಣದ ಸಮಸ್ಯೆಗೆ ಸ್ಪಂದಿಸಿರುವ ಶಾಸಕ ಸಮರ್ಥ್ ಶಾಮನೂರು, ನಗರದ ಪ್ರಮು

ಗೃಹಲಕ್ಷ್ಮಿ ಯೋಜನೆಯಿಂದ ಮಹಿಳೆಯರ ಬದುಕಿನಲ್ಲಿ ಆರ್ಥಿಕ ಸ್ವಾತಂತ್ರ್ಯದ ಹೊಸ ಅಧ್ಯಾಯ: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

ಯೋಜನೆಯಿಂದ ಕುಟುಂಬ ನಿರ್ವಹಣೆಗೆ ನೆರವು, ಸ್ವಂತ ಉದ್ಯಮ ಆರಂಭಿಸಲು ಮಹಿಳೆಯರಿಗೆ ಆತ್ಮವಿಶ್ವಾಸ

"ಮುಂಜಾನೆಯ ಮೆರಗು"

ಬೆಂಗಳೂರು ನ, 06– ಮಹಿಳೆಯರ ಆರ್ಥಿಕ ಸಬಲೀಕರಣ ಮತ್ತು ಸ್ವಾವಲಂಬಿ ಬದುಕಿಗೆ ನೆರವಾಗುವ ಉದ್ದೇಶದಿಂದ ಜಾರಿಗೊಳಿಸಿರುವ ಗೃಹಲಕ್ಷ್ಮಿ ಯೋಜನೆಯು ಸಾವಿರಾರು ಕುಟುಂಬಗಳ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆಗೆ ಕಾರಣವಾಗುತ್ತಿದೆ. ಮಹಿಳೆಯರಲ್ಲಿ ಆರ್ಥಿಕ ಸ್ವಾತಂತ್ರ್ಯ, ಆತ್ಮವಿಶ್ವಾಸ ಹಾಗೂ ಸ್ವಂತ ನಿರ್ಧಾರಗಳನ್ನು ಕೈಗೊಳ್ಳುವ ಸಾಮರ್ಥ್ಯ ಹೆಚ್ಚುತ್ತಿರುವುದು ಯೋಜನೆಯ ಮಹತ್ವವನ್ನು ತೋರಿಸುತ್ತದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿಪ್ರಾಯಪಟ್ಟರು.

ನಗರದ ಗೃಹ ಕಚೇರಿ ಕೃಷ್ಣಾದಲ್ಲಿ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿ ಮಹಿಳೆಯರೊಂದಿಗೆ ಅವರು ಆತ್ಮೀಯ ಸಂವಾದ ನಡೆಸಿದರು. ಈ ಸಂದರ್ಭದಲ್ಲಿ ಮಹಿಳೆಯರು ಯೋಜನೆಯಿಂದ ತಮ್ಮ ವೈಯಕ್ತಿಕ ಬದುಕು ಹಾಗೂ ಕುಟುಂಬದ ಆರ್ಥಿಕ ಪರಿಸ್ಥಿತಿಯಲ್ಲಿ ಆಗಿರುವ ಬದಲಾವಣೆಗಳನ್ನು ಮುಕ್ತವಾಗಿ ಹಂಚಿಕೊಂಡರು.

ಗೃಹಲಕ್ಷ್ಮಿ ಯೋಜನೆಯಡಿ ದೊರೆಯುತ್ತಿರುವ ಆರ್ಥಿಕ ನೆರವು ಕುಟುಂಬದ ದೈನಂದಿನ ಅಗತ್ಯಗಳನ್ನು ಪೂರೈಸಲು, ಮಕ್ಕಳ ಶಿಕ್ಷಣ, ಆರೋಗ್ಯ, ಮನೆ ನಿರ್ವಹಣೆ ಸೇರಿದಂತೆ ವಿವಿಧ



ಖರ್ಚುಗಳನ್ನು ನಿಭಾಯಿಸಲು ಸಹಕಾರಿಯಾಗಿದೆ. ಈ ಹಿಂದೆ ಸಣ್ಣಪುಟ್ಟ ಅಗತ್ಯಗಳಿಗೂ ಇತರರನ್ನು ಅವಲಂಬಿಸಬೇಕಿದ್ದ ಮಹಿಳೆಯರು ಇದೀಗ ತಮ್ಮ ಕೈಯಲ್ಲಿ ಹಣವಿರುವುದರಿಂದ ಸ್ವಂತ ನಿರ್ಧಾರಗಳನ್ನು ತೆಗೆದುಕೊಳ್ಳಲು ಸಾಧ್ಯವಾಗುತ್ತಿದೆ ಎಂಬ ಅನುಭವಗಳನ್ನು ಹಂಚಿಕೊಂಡರು.

ಕೆಲವು ಮಹಿಳೆಯರು ಯೋಜನೆಯಿಂದ ದೊರೆಯುತ್ತಿರುವ ಹಣವನ್ನು ಉಳಿತಾಯ ಮಾಡುತ್ತಿರುವುದಾಗಿ, ಇನ್ನು ಕೆಲವರು ಸಣ್ಣ ಪ್ರಮಾಣದ ಉದ್ಯಮ ಹಾಗೂ ಸ್ವಯಂ ಉದ್ಯೋಗ ಚಟುವಟಿಕೆಗಳಿಗೆ ಬಳಸಿಕೊಳ್ಳುತ್ತಿರುವುದಾಗಿ ತಿಳಿಸಿದರು. ಕುಟುಂಬದ ಆರ್ಥಿಕ ಜವಾಬ್ದಾರಿಯಲ್ಲಿ ತಮ್ಮ ಪಾಲುದಾರಿಕೆ ಹೆಚ್ಚಿರುವುದರಿಂದ ಸಮಾಜದಲ್ಲಿ ಗೌರವ ಮತ್ತು ಆತ್ಮವಿಶ್ವಾಸವೂ ವೃದ್ಧಿಯಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಮಹಿಳೆಯರ ಅನುಭವಗಳನ್ನು ಆಲಿಸಿದ ಮುಖ್ಯಮಂತ್ರಿ, ಮಹಿಳೆಯರು ಆರ್ಥಿಕವಾಗಿ ಸದೃಢರಾದಾಗ ಕುಟುಂಬ ಮಾತ್ರವಲ್ಲದೆ ಇಡೀ ಸಮಾಜದ ಅಭಿವೃದ್ಧಿಗೂ ವೇಗ ದೊರೆಯುತ್ತದೆ ಎಂಬ ಆಶಯ ವ್ಯಕ್ತಪಡಿಸಿದರು. ಮಹಿಳೆಯರು ಕೇವಲ ಸರ್ಕಾರದ ಯೋಜನೆಗಳ ಫಲಾನುಭವಿಗಳಾಗಿ ಉಳಿಯದೆ, ಸ್ವಂತ ದುಡಿಮೆ, ಕೌಶಲ್ಯ ಮತ್ತು ಉದ್ಯಮಶೀಲತೆಯ ಮೂಲಕ ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು. ಮಹಿಳೆಯರಲ್ಲಿರುವ ಪ್ರತಿಭೆ ಮತ್ತು ಸೃಜನಶೀಲತೆಗೆ ಸೂಕ್ತ ಪ್ರೋತ್ಸಾಹ ದೊರೆತರೆ ಅವರು ಇನ್ನಷ್ಟು ಸಾಧನೆ ಮಾಡಲು ಸಾಧ್ಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಂವಾದದ ಸಂದರ್ಭದಲ್ಲಿ ಫಲಾನುಭವಿ ಮಹಿಳೆಯರು ತಾವೇ ಕೈಯಾರೆ ತಯಾರಿಸಿದ್ದ ಪುಟ್ಟ ತೊಟ್ಟಿಲು, ಅಲಂಕಾರಿಕ ದೀಪಗಳು ಸೇರಿದಂತೆ ವಿವಿಧ ಕರಕುಶಲ ವಸ್ತುಗಳನ್ನು ಮುಖ್ಯಮಂತ್ರಿಗಳಿಗೆ ಉಡುಗೊರೆಯಾಗಿ ನೀಡಿದರು. ಮಹಿಳೆಯರ ಕೈಯಲ್ಲಿ ಅರಳಿದ ಸೃಜನಶೀಲತೆ ಹಾಗೂ ಅವರ ಮಾತುಗಳಲ್ಲಿನ ಆತ್ಮವಿಶ್ವಾಸವನ್ನು ಕಂಡು ಮುಖ್ಯಮಂತ್ರಿ ಸಂತಸ ವ್ಯಕ್ತಪಡಿಸಿದರು.

ಮಹಿಳೆಯರು ತಮ್ಮಲ್ಲಿರುವ ಕೌಶಲ್ಯವನ್ನು ಗುರುತಿಸಿಕೊಂಡು ಅದನ್ನು ಆದಾಯದ ಮೂಲವನ್ನಾಗಿ ಪರಿವರ್ತಿಸಿಕೊಳ್ಳುವ ಪ್ರಯತ್ನ ಮಾಡುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ. ಇಂತಹ ಪ್ರತಿಭೆಗಳಿಗೆ ಉತ್ತೇಜನ ನೀಡುವ ಮೂಲಕ ಮಹಿಳೆಯರ ಸ್ವಾವಲಂಬನೆಯ ಹಾದಿಯನ್ನು ಮತ್ತಷ್ಟು ಬಲಪಡಿಸಬೇಕಿದೆ ಎಂಬ ಸಂದೇಶ ಈ ಸಂವಾದದಲ್ಲಿ ವ್ಯಕ್ತವಾಯಿತು.

ದೀಪಾವಳಿ ಹಬ್ಬದ ಸಂಭ್ರಮದ ಹಿನ್ನೆಲೆಯಲ್ಲಿ ಗೃಹಲಕ್ಷ್ಮಿ ಫಲಾನುಭವಿ ಮಹಿಳೆಯರಿಗೆ ಮುಖ್ಯಮಂತ್ರಿ ಸೌಭಾಗ್ಯ, ಸಮೃದ್ಧಿ ಹಾಗೂ ಗೌರವದ ಸಂಕೇತವಾದ ಬಾಗಿನ ನೀಡಿ ಶುಭ ಹಾರೈಸಿದರು. ಬಳಿಕ ಮಹಿಳೆಯರೊಂದಿಗೆ ಆತ್ಮೀಯವಾಗಿ ಕುಳಿತು ಭೋಜನ ಸವಿಯುವ ಮೂಲಕ



ಅವರೊಂದಿಗೆ ಸಂತಸದ ಕ್ಷಣಗಳನ್ನು ಹಂಚಿಕೊಂಡರು.

ಸರ್ಕಾರದ ಗ್ಯಾರಂಟಿ ಯೋಜನೆಗಳು ಜನರ ಬದುಕಿನಲ್ಲಿ ಯಾವ ರೀತಿಯ ಬದಲಾವಣೆ ತರುತ್ತಿವೆ ಎಂಬುದನ್ನು ಫಲಾನುಭವಿಗಳಿಂದಲೇ ನೇರವಾಗಿ ತಿಳಿದುಕೊಳ್ಳುವ ಪ್ರಯತ್ನವಾಗಿ ಈ ಸಂವಾದ ಮಹತ್ವ ಪಡೆದಿದೆ. ವಿಶೇಷವಾಗಿ ಮಹಿಳೆಯರ ಆರ್ಥಿಕ ಸ್ವಾತಂತ್ರ್ಯ, ಕುಟುಂಬದ ನಿರ್ವಹಣೆಯಲ್ಲಿ ಅವರ ಪಾತ್ರ ಹಾಗೂ ಸ್ವಾವಲಂಬನೆಯತ್ತ ಸಾಗುತ್ತಿರುವ ಹೆಜ್ಜೆಗಳು ಗೃಹಲಕ್ಷ್ಮಿ ಯೋಜನೆಯ ಉದ್ದೇಶವನ್ನು ಪ್ರತಿಬಿಂಬಿಸಿದವು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ.ರೇವಣ್ಣ, ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪದ್ಮಾವತಿ, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್, ಇಲಾಖೆಯ ನಿರ್ದೇಶಕ ಡಾ.ಮಹೇಶ್ ಬಾಬು ಸೇರಿದಂತೆ ಹಲವು ಗಣ್ಯರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

ಕ್ರೀಡಾಪಟುಗಳ ಪ್ರತಿಭೆ ಅನಾವರಣಕ್ಕೆ ಉತ್ತಮ ವೇದಿಕೆ: ಶಾಸಕ ಎಂ.ಪಿ. ಲತಾ ಮಲ್ಲಿಕಾರ್ಜುನ

"ಮುಂಜಾನೆಯ ಮೆರಗು"

ಹರಪನಹಳ್ಳಿ ನ, 06– ತಾಲೂಕಿನ ಚಿಗಟೇರಿ ಗ್ರಾಮದ ಶ್ರೀ ನಾರದಮುನಿ ಪ್ರೌಢಶಾಲೆ ಆವರಣದಲ್ಲಿ ಪ್ರಪ್ರಥಮ ಬಾರಿಗೆ ಕಲಬುರಗಿ ವಿಭಾಗ ಮಟ್ಟದ 14 ಮತ್ತು 17 ವರ್ಷದೊಳಗಿನ ಬಾಲಕ ಹಾಗೂ ಬಾಲಕಿಯರ ಖೋ–ಖೋ ಪಂದ್ಯಾವಳಿಗಳನ್ನು ಆಯೋಜಿಸಲಾಗಿದೆ.



ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ಅವರ ಪ್ರೋತ್ಸಾಹದೊಂದಿಗೆ ನಡೆಯುತ್ತಿರುವ ಈ ಕ್ರೀಡಾಕೂಟವು ಗ್ರಾಮೀಣ ಭಾಗದ ಕ್ರೀಡಾಪಟುಗಳ ಪ್ರತಿಭೆ ಅನಾವರಣಗೊಳಿಸಲು ಉತ್ತಮ ವೇದಿಕೆಯಾಗಿದೆ.

ಖೋ–ಖೋ ಭಾರತದಲ್ಲಿ ಜನಪ್ರಿಯವಾಗಿರುವ ಸಾಂಪ್ರದಾಯಿಕ ತಂಡ ಕ್ರೀಡೆಯಾಗಿದ್ದು, ವೇಗ, ಚುರುಕುತನ, ಏಕಾಗ್ರತೆ, ಶಿಸ್ತು ಹಾಗೂ ತಂಡದ ಸಹಕಾರಕ್ಕೆ ಹೆಚ್ಚಿನ ಮಹತ್ವ ನೀಡುತ್ತದೆ. ಇಂತಹ ಕ್ರೀಡಾಕೂಟಗಳು ವಿದ್ಯಾರ್ಥಿಗಳಲ್ಲಿ ಕ್ರೀಡಾಸಕ್ತಿ ಬೆಳೆಸುವುದರ ಜೊತೆಗೆ ನಾಯಕತ್ವ ಗುಣ ಮತ್ತು ಪರಸ್ಪರ ಸಹಕಾರದ ಮನೋಭಾವವನ್ನು ಬೆಳೆಸಲು ಸಹಕಾರಿಯಾಗಿವೆ.

ಚಿಗಟೇರಿ ಗ್ರಾಮದಲ್ಲಿ ಪ್ರಪ್ರಥಮ ಬಾರಿಗೆ ವಿಭಾಗ ಮಟ್ಟದ ಪಂದ್ಯಾವಳಿ ನಡೆಯುತ್ತಿರುವುದು ಗ್ರಾಮಸ್ಥರು, ವಿದ್ಯಾರ್ಥಿಗಳು ಹಾಗೂ ಕ್ರೀಡಾಭಿಮಾನಿಗಳಲ್ಲಿ ಸಂತಸ ಮೂಡಿಸಿದೆ.

ಮಹಿಳೆಯರ ತಾಯ್ತನವನ್ನು ರಾಜಕೀಯ ವ್ಯಂಗ್ಯಕ್ಕೆ ಬಳಸುವುದು ಸರಿಯಲ್ಲ: ಸಿ.ಟಿ.ರವಿ ಹೇಳಿಕೆಗೆ ಬಿ.ಕೆ.ಹರಿಪ್ರಸಾದ್ ತಿರುಗೇಟು

"ಮುಂಜಾನೆಯ ಮೆರಗು"

ಬೆಂಗಳೂರು ನ, 06– ಮಹಿಳೆಯರ ಗೌರವ, ತಾಯ್ತನ ಮತ್ತು ಹೆರಿಗೆಯಂತಹ ಸೂಕ್ಷ್ಮ ವಿಚಾರಗಳನ್ನು ರಾಜಕೀಯ ಟೀಕೆಗೆ ಬಳಸಿಕೊಳ್ಳುತ್ತಿರುವುದು ಸರಿಯಲ್ಲ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ಬಿಜೆಪಿ ನಾಯಕ ಸಿ.ಟಿ.ರವಿ ಅವರ ಹೇಳಿಕೆಯನ್ನು ಖಂಡಿಸಿದ್ದಾರೆ.

ಕೆಲವರಿಗೆ ಮನೆಯಲ್ಲಿ ಮಕ್ಕಳಾದರೂ ಆರ್‌ಎಸ್‌ಎಸ್ ನೆನಪಾಗುತ್ತದೆ ಎಂಬ ಸಿ.ಟಿ.ರವಿ ಅವರ ಹೇಳಿಕೆಗೆ ಪ್ರತಿಕ್ರಿಯಿಸಿರುವ ಬಿ.ಕೆ.ಹರಿಪ್ರಸಾದ್, ರಾಜಕೀಯ ವ್ಯಂಗ್ಯದ ಹೆಸರಿನಲ್ಲಿ ಮಹಿಳೆಯ ಹೆರಿಗೆ ಮತ್ತು ತಾಯ್ತನವನ್ನು ರಾಜಕೀಯ ಕೆಸರೆರಚಾಟಕ್ಕೆ ಎಳೆದು ತರುವುದು ಅಸಮಂಜಸ ಎಂದು ಟೀಕಿಸಿದ್ದಾರೆ.

ಮಾತೆತ್ತಿದರೆ ಭಾರತೀಯ ಸಂಸ್ಕೃತಿ, ಮಹಿಳೆಯರ ಗೌರವ ಹಾಗೂ ಮಾತೃಶಕ್ತಿಯ ಬಗ್ಗೆ ಮಾತನಾಡುವ ಸಂಘಪರಿವಾರದ ನಾಯಕರಿಂದ ಇಂತಹ ಹೇಳಿಕೆಗಳು ಬರುತ್ತಿರುವುದು ವಿರೋಧಾಭಾಸದ ಸಂಗತಿ. ಮಹಿಳೆಯ ತಾಯ್ತನವನ್ನೇ ರಾಜಕೀಯ ಅಪಹಾಸ್ಯದ ವಸ್ತುವನ್ನಾಗಿ ಮಾಡಿಕೊಳ್ಳುವುದು ಸರಿಯಲ್ಲ ಎಂದು ಅವರು ಹೇಳಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ರಾಜಕೀಯ ಭಾಷಣಗಳಲ್ಲಿ ಮಾಜಿ ಪ್ರಧಾನಿ ಜವಾಹರಲಾಲ್ ನೆಹರು ಹಾಗೂ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರನ್ನು ಉಲ್ಲೇಖಿಸುವುದನ್ನು ಪ್ರಸ್ತಾಪಿಸಿದ ಹರಿಪ್ರಸಾದ್, ದೇಶದಲ್ಲಿ ಮಳೆ ಬಂದರೂ ನೆಹರು, ಬರ ಬಂದರೂ ನೆಹರು, ಬೆಲೆ ಏರಿಕೆಯಾದರೂ ನೆಹರು, ಆಡಳಿತ ವೈಫಲ್ಯವಾದರೂ ನೆಹರು



ಅವರನ್ನು ನೆನಪಿಸಿಕೊಳ್ಳಲಾಗುತ್ತದೆ ಎಂದು ವ್ಯಂಗ್ಯವಾಡಿದ್ದಾರೆ.

ರಾಜಕೀಯ ವಿರೋಧಿಗಳನ್ನು ಟೀಕಿಸಲು ವಿಚಾರಾಧಾರಿತ ವಿಷಯಗಳನ್ನು ಬಳಸಿಕೊಳ್ಳಬೇಕು. ವೈಯಕ್ತಿಕ ಹಾಗೂ ಮಹಿಳೆಯರ ಬದುಕಿಗೆ ಸಂಬಂಧಿಸಿದ ಸೂಕ್ಷ್ಮ ವಿಚಾರಗಳನ್ನು ರಾಜಕೀಯ ವಾಗ್ವಾದಕ್ಕೆ ಬಳಸಬಾರದು. ಮಹಿಳೆಯರನ್ನು ಗೌರವಿಸುವ ಬಗ್ಗೆ ಮಾತನಾಡುವವರು ತಮ್ಮ ಹೇಳಿಕೆಗಳಲ್ಲಿಯೂ ಅದೇ ಗೌರವವನ್ನು ತೋರಿಸಬೇಕು ಎಂದು ಬಿ.ಕೆ.ಹರಿಪ್ರಸಾದ್ ಆಗ್ರಹಿಸಿದ್ದಾರೆ.

ಈ ಮೂಲಕ ಸಿ.ಟಿ.ರವಿ ಅವರ ಹೇಳಿಕೆಯನ್ನು ಪ್ರಶ್ನಿಸಿರುವ ಅವರು, ಮಹಿಳೆಯರ ಗೌರವ ಮತ್ತು ತಾಯ್ತನದ ವಿಚಾರದಲ್ಲಿ ರಾಜಕೀಯ ಪಕ್ಷಗಳ ನಾಯಕರು ಜವಾಬ್ದಾರಿಯುತವಾಗಿ ಮಾತನಾಡಬೇಕು ಎಂಬ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಹದಡಿ, ಕನಗೊಂಡನಹಳ್ಳಿ, ನಾಗರಸನಹಳ್ಳಿ ಗ್ರಾಮಗಳಿಗೆ ಸಾರಿಗೆ ಸಂಪರ್ಕ ವಿಸ್ತರಣೆ: ಶಾಸಕ ಸಮರ್ಥ್ ಶಾಮನೂರು

"ಮುಂಜಾನೆಯ ಮೆರಗು"

ದಾವಣಗೆರೆ ನ, 06– ಗ್ರಾಮೀಣ ಭಾಗದ ಸಾರ್ವಜನಿಕರು ಹಾಗೂ ಶಾಲಾ–ಕಾಲೇಜು ವಿದ್ಯಾರ್ಥಿಗಳ ಬಹುದಿನಗಳ ಸಾರಿಗೆ ಸೌಲಭ್ಯದ ಬೇಡಿಕೆಗೆ ಸ್ಪಂದಿಸಿರುವ ಶಾಸಕ ಸಮರ್ಥ್ ಶಾಮನೂರು, ದಾವಣಗೆರೆ–ಜಡಗನಹಳ್ಳಿ ಮಾರ್ಗದಲ್ಲಿ ನೂತನ ಕೆಎಸ್‌ಆರ್‌ಟಿಸಿ ಬಸ್ ಸಂಚಾರಕ್ಕೆ ಚಾಲನೆ ನೀಡಿದರು.



ದಾವಣಗೆರೆಯಿಂದ ಜಡಗನಹಳ್ಳಿಗೆ ತೆರಳುವ ಮಾರ್ಗದಲ್ಲಿ ಹದಡಿ, ಕನಗೊಂಡನಹಳ್ಳಿ, ನಾಗರಸನಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಉದ್ದೇಶದಿಂದ ಹೊಸ ಬಸ್ ಸೇವೆ ಆರಂಭಿಸಲಾಗಿದೆ.

ಈ ಭಾಗದ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ದೈನಂದಿನ ಪ್ರಯಾಣಕ್ಕಾಗಿ ಎದುರಿಸುತ್ತಿದ್ದ ಸಾರಿಗೆ ಸಮಸ್ಯೆಯನ್ನು ಗಮನಿಸಿ, ಅವರ ಮನವಿಯ ಮೇರೆಗೆ ನೂತನ ಬಸ್ ಸಂಚಾರಕ್ಕೆ ವ್ಯವಸ್ಥೆ ಮಾಡಲಾಗಿದೆ. ಇದರಿಂದ ಗ್ರಾಮೀಣ ಭಾಗದ ಜನರು ನಗರಕ್ಕೆ ಬಂದು ಹೋಗಲು ಹಾಗೂ ವಿದ್ಯಾರ್ಥಿಗಳು ಶಾಲಾ–ಕಾಲೇಜುಗಳಿಗೆ ತೆರಳಲು ಹೆಚ್ಚಿನ ಅನುಕೂಲವಾಗಲಿದೆ.

ಬಸ್ ಸಂಚಾರಕ್ಕೆ ಚಾಲನೆ ನೀಡಿದ ಬಳಿಕ ಜಡಗನಹಳ್ಳಿಯ ಸರ್ಕಾರಿ ಶಾಲೆಗೆ ಭೇಟಿ ನೀಡಿದ ಶಾಸಕ ಸಮರ್ಥ್ ಶಾಮನೂರು, ಶಾಲಾ ಮಕ್ಕಳೊಂದಿಗೆ ಆತ್ಮೀಯವಾಗಿ ಬೆರೆತು ಅವರೊಂದಿಗೆ ಸಂತಸದ ಕ್ಷಣಗಳನ್ನು ಹಂಚಿಕೊಂಡರು. ನೂತನ ಬಸ್ ಸೇವೆ ಆರಂಭವಾಗಿರುವುದಕ್ಕೆ ಗ್ರಾಮಸ್ಥರು ವ್ಯಕ್ತಪಡಿಸಿದ ಸಂತಸ ಹಾಗೂ ಆತ್ಮೀಯ ಸ್ವಾಗತಕ್ಕೆ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರು, ಸಾರ್ವಜನಿಕರು, ಶಾಲಾ ವಿದ್ಯಾರ್ಥಿಗಳು ಹಾಗೂ ಕೆಎಸ್‌ಆರ್‌ಟಿಸಿ ಸಿಬ್ಬಂದಿ ಉಪಸ್ಥಿತರಿದ್ದರು.

ಬ್ಯಾಂಕ್‌ಗಳಲ್ಲಿನ ವಿಮಾ ಯೋಜನೆಗಳ ಸದುಪಯೋಗ ಪಡೆದುಕೊಳ್ಳಿ: ಆರ್.ವಿ. ಮುರುಳಿ

ಕೋಗುಂಡೆಯಲ್ಲಿ ಆರ್ಥಿಕ ಸಾಕ್ಷರತಾ ಅರಿವು ಕಾರ್ಯಕ್ರಮ

"ಮುಂಜಾನೆಯ ಮೆರಗು"

ಭರಮಸಾಗರ ನ, 06– ಸಾರ್ವಜನಿಕರು ಬ್ಯಾಂಕ್‌ಗಳಲ್ಲಿ ಲಭ್ಯವಿರುವ ವಿವಿಧ ವಿಮೆ ಹಾಗೂ ಸಾಮಾಜಿಕ ಭದ್ರತಾ ಯೋಜನೆಗಳ ಸದುಪಯೋಗ ಪಡೆದು–ಕೊಂಡು ಆರ್ಥಿಕ ಭದ್ರತೆ ಹೊಂದಬೇಕು ಎಂದು ಅಮೂಲ್ಯ ಆರ್ಥಿಕ ಸಾಕ್ಷರತಾ ಕೇಂದ್ರದ ಅಧಿಕಾರಿ ಆರ್.ವಿ. ಮುರುಳಿ ಸಲಹೆ ನೀಡಿದರು.

ಹೋಬಳಿಯ ಕರ್ನಾಟಕ ಗ್ರಾಮೀಣ ಬ್ಯಾಂಕ್‌ನ ಬಹದ್ದೂರಘಟ್ಟ ಶಾಖೆ ಹಾಗೂ ಚಿತ್ರದುರ್ಗದ ಅಮೂಲ್ಯ ಆರ್ಥಿಕ ಸಾಕ್ಷರತಾ ಕೇಂದ್ರದ ಸಹಯೋಗದಲ್ಲಿ ಕೋಗುಂಡೆ ಗ್ರಾಮ ಪಂಚಾಯಿತಿ ಆವರಣದಲ್ಲಿ ಶುಕ್ರವಾರ ಆಯೋಜಿಸಿದ್ದ



ಆರ್ಥಿಕ ಸಾಕ್ಷರತಾ ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ಪ್ರತಿಯೊಬ್ಬ ನಾಗರಿಕನಿಗೂ ಬ್ಯಾಂಕಿಂಗ್ ಸೇವೆಗಳು ಹಾಗೂ ಸಾಮಾಜಿಕ ಭದ್ರತಾ ಯೋಜನೆಗಳನ್ನು ತಲುಪಿಸುವ ಉದ್ದೇಶದಿಂದ ಭಾರತ ಸರ್ಕಾರದ ಹಣಕಾಸು ಸೇವೆಗಳ ಇಲಾಖೆ ಮಹತ್ವಾಕಾಂಕ್ಷಿ ಹಣಕಾಸು ಒಳಗೊಳ್ಳುವಿಕೆ ಸ್ಯಾಚುರೇಶನ್ ಅಭಿಯಾನಕ್ಕೆ ಚಾಲನೆ ನೀಡಿದೆ. ಅಕ್ಟೋಬರ್ 21ರಿಂದ ಆರಂಭವಾಗಿರುವ ಈ ವಿಶೇಷ ಜಾಗೃತಿ ಅಭಿಯಾನವು 2026ರ ಡಿಸೆಂಬರ್ 31ರವರೆಗೆ ನಡೆಯಲಿದೆ.

ಈ ಅಭಿಯಾನದಡಿ ಪ್ರಧಾನಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ ಹಾಗೂ ಅಟಲ್ ಪಿಂಚಣಿ ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತಿದೆ. ರಾಜ್ಯದ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿಯೂ ಹಣಕಾಸು ಸೇರ್ಪಡೆ



ಪರಿಪೂರ್ಣತೆ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದ್ದು, ಸಾರ್ವಜನಿಕರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಕರ್ನಾಟಕ ಗ್ರಾಮೀಣ ಬ್ಯಾಂಕ್‌ನ ಬಹದ್ದೂರಘಟ್ಟ ಶಾಖೆಯ ವ್ಯವಸ್ಥಾಪಕ ಆರ್.ವಿ. ಗಿರೀಶ್ ಮಾತನಾಡಿ, ಗ್ರಾಹಕರು ತಮ್ಮ ಬ್ಯಾಂಕ್ ಖಾತೆಗಳ ನವೀಕರಣ, ಕೆವೈಸಿ ಪ್ರಕ್ರಿಯೆ ಹಾಗೂ ಚಾಲ್ತಿ ಖಾತೆಗಳಿಗೆ ಆಧಾರ್ ಜೋಡಣೆ ಸೇರಿದಂತೆ ಬ್ಯಾಂಕಿಂಗ್ ಸೇವೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿದ್ದಲ್ಲಿ ಶಾಖೆಗೆ ಭೇಟಿ ನೀಡಬೇಕು. ಬ್ಯಾಂಕ್ ಸಿಬ್ಬಂದಿ ಅಗತ್ಯ ಮಾಹಿತಿ ನೀಡಿ ಸಮಸ್ಯೆಗಳನ್ನು ಪರಿಹರಿಸಲು ಸಹಕರಿಸಲಿದ್ದಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೋಗುಂಡೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ದಿಲೀಪ್ ಸಾಬ್ ವಹಿಸಿದ್ದರು. ಎನ್‌ಆರ್‌ಎಲ್‌ಎಂ ಅಧ್ಯಕ್ಷೆ ಉಷಾ, ಎಂಬಿಕೆ ಸುಮಲತಾ ಟಿ., ಉಮಾದೇವಿ, ಗೀತಾ, ಚಂದ್ರಮ್ಮ, ಲಕ್ಷ್ಮೀದೇವಿ, ಶರಣಮ್ಮ, ಮಂಜುನಾಥ್, ತಿಮ್ಮೇಶಿ ಬಿ., ನಾಗಭೂಷಣ್, ಚೇತನ್ ಕುಮಾರ್ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ಮೈಸೂರಿನಲ್ಲಿ ಬಿಜೆಪಿಯಿಂದ ಬೃಹತ್ ಪಾದಯಾತ್ರೆ: ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿ.ವೈ.ವಿಜಯೇಂದ್ರ ವಾಗ್ದಾಳಿ

'ಪ್ರಜಾಪ್ರಭುತ್ವ ಉಳಿಸಿ–ಅರಾಜಕತೆ ಅಳಿಸಿ' ಘೋಷಣೆಯೊಂದಿಗೆ ಬಿಜೆಪಿ ಶಕ್ತಿ ಪ್ರದರ್ಶನ

"ಮುಂಜಾನೆಯ ಮೆರಗು"

ಮೈಸೂರು ನ, 06– ರಾಜ್ಯದ ಕಾ

ಶಿಕ್ಷಣದಿಂದ ಮಾತ್ರ 'ಬರದನಾಡು' ಎಂಬ ಹಣೆಪಟ್ಟಿ ಕಳಚಲು ಸಾಧ್ಯ: ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ

"ಮುಂಜಾನೆಯ ಮೆರಗು"

ಜಗಳೂರು ನ, 06– ಬರದನಾಡು ಎಂಬ ಹಣೆಪಟ್ಟಿಯನ್ನು ಕಳಚಿ ಜಗಳೂರು ತಾಲೂಕಿನ ಸಮಗ್ರ ಅಭಿವೃದ್ಧಿ ಸಾಧಿಸಲು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುವುದು ಅಗತ್ಯ. ಶಿಕ್ಷಣದಿಂದ ಮಾತ್ರ ಗ್ರಾಮೀಣ ಪ್ರದೇಶಗಳ ಚಿತ್ರಣ ಬದಲಿಸಲು ಸಾಧ್ಯ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಹೇಳಿದರು.

ತಾಲೂಕಿನ ಕಲ್ಲೇದೇವರಪುರ ಹಾಗೂ ಬಸಪ್ಪನಹಟ್ಟಿ ಗ್ರಾಮಗಳಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ಸುಮಾರು 3.25 ಕೋಟಿ ರೂ. ವೆಚ್ಚದಲ್ಲಿ ಎರಡು ಕಿ.ಮೀ. ವ್ಯಾಪ್ತಿಯಲ್ಲಿ ಕೈಗೊಳ್ಳಲಿರುವ ಬಾಕ್ಸ್ ಚರಂಡಿ ಕಾಮಗಾರಿಗೆ ಶುಕ್ರವಾರ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಕಲ್ಲೇದೇವರಪುರ ಗ್ರಾಮಕ್ಕೆ ನಾಲ್ಕನೇ ಬಾರಿಗೆ ಭೇಟಿ ನೀಡುತ್ತಿದ್ದೇನೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ಈ ಭಾಗದ ಜನರು ಸುಮಾರು 9 ಸಾವಿರ ಮತಗಳ ಮುನ್ನಡೆ ನೀಡುವ ಮೂಲಕ ನನ್ನ ಗೆಲುವಿಗೆ ಸಹಕರಿಸಿದ್ದಾರೆ. ಗ್ರಾಮದಲ್ಲಿ ಹಲವು ವರ್ಷಗಳಿಂದ ಸಮರ್ಪಕ ಚರಂಡಿ ವ್ಯವಸ್ಥೆಯಿಲ್ಲದೆ ಜನರು ತೊಂದರೆ ಅನುಭವಿಸುತ್ತಿದ್ದರು. ಈ ಸಮಸ್ಯೆ ಪರಿಹರಿಸುವಂತೆ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರಿಗೆ ಮನವಿ ಸಲ್ಲಿಸಲಾಗಿತ್ತು. ಸುಮಾರು ಒಂದೂವರೆ ವರ್ಷಗಳ ನಿರಂತರ ಪ್ರಯತ್ನದ ಫಲವಾಗಿ ಇಂದು ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದರು.

ಹರ್ಷ ಕುಂಬಳಗುಂಟೆ ಅವರು ಒಂದು ಕೋಟಿ ರೂ. ವೆಚ್ಚದ ಅಭಿವೃದ್ಧಿ ಕಾರ್ಯಗಳಿಗೆ ದೇಣಿಗೆ ನೀಡಿರುವುದು ಶ್ಲಾಘನೀಯ. ಸಮಾಜದ ಅಭಿವೃದ್ಧಿಗೆ ಇಂತಹ ದಾನಿಗಳ ಕೊಡುಗೆ ಅತ್ಯಂತ ಮಹತ್ವದ್ದಾಗಿದೆ. ಇಂತಹ ದಾನಿಗಳ ಸಂ–



ಖ್ಯೆ ಮತ್ತಷ್ಟು ಹೆಚ್ಚಾಗಬೇಕು. ತರಳಬಾಳು ಹುಣ್ಣಿಮೆ ಮಹೋತ್ಸವದ ಸಂದರ್ಭದಲ್ಲಿ ಸಿರಿಗೆರೆ ಶ್ರೀಗಳ ಆಶೀರ್ವಾದ ಹಾಗೂ ಸಹಕಾರದಿಂದ ತಾಲೂಕಿನ 57 ಕೆರೆಗಳಿಗೆ ನೀರು ಹರಿಸುವ ಯೋಜನೆ ಸಾಕಾರಗೊಳ್ಳುತ್ತಿದೆ. ಇದರಿಂದ ರೈತರ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗುವುದರ ಜತೆಗೆ ಆರ್ಥಿಕ ಅಭಿವೃದ್ಧಿಗೂ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಜಗಳೂರು ತಾಲೂಕಿನ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಲಾಗುತ್ತಿದೆ. ಪಟ್ಟಣದಲ್ಲಿ ಅಮೃತ್ ಯೋಜನೆಗೆ ಚಾಲನೆ ನೀಡಲಾಗಿದ್ದು, ಯೋಜನೆ ಪೂರ್ಣಗೊಂಡ ಬಳಿಕ ಹೆಚ್ಚಿನ ಜನರಿಗೆ ಕುಡಿಯುವ ನೀರಿನ ಸೌಲಭ್ಯ ದೊರೆಯಲಿದೆ. 57 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯಡಿ ಆರಂಭದಲ್ಲಿ 53 ಕೆರೆಗಳಿಗೆ ನೀರು ಹರಿಸಲಾಗಿತ್ತು. ಅರಣ್ಯ ಪ್ರದೇಶದಲ್ಲಿರುವ ಉಳಿದ ನಾಲ್ಕು ಕೆರೆಗಳಿಗೆ ನೀರು ಹರಿಸಲು ಪೈಪ್‌ಲೈನ್ ಅಳವಡಿಸುವ ಸಂಬಂಧ ಅರಣ್ಯ ಇಲಾಖೆಯ ಅನುಮತಿಗಾಗಿ ಪ್ರಯತ್ನಿಸಲಾಗಿತ್ತು. ಇದೀಗ ಅನುಮತಿ ದೊರೆತಿದ್ದು, ಆ ಕೆರೆಗಳಿಗೂ ನೀರು ಹರಿಸುವ ಕಾರ್ಯ ಪ್ರಗತಿಯಲ್ಲಿದೆ ಎಂದರು.

ಜಿಲ್ಲಾ ಕೇಂದ್ರದ ಹೊರಗೆ ಮೊದಲ ಬಾರಿಗೆ ದಿಶಾ ಸಮಿತಿ ಸಭೆಯನ್ನು ಜಗಳೂರಿನಲ್ಲಿ ನಡೆಸಿರುವುದು ವಿಶೇಷವಾಗಿದೆ. ತಾಲೂಕಿನಲ್ಲಿ ಏಕಲವ್ಯ ಮಾದರಿ ವಸತಿ ಶಾಲೆ ನಿರ್ಮಾಣಕ್ಕೂ ಒತ್ತು ನೀಡಲಾಗಿದೆ. ಸಂಸದರ ಅನುದಾನ ಸೀಮಿತವಾಗಿರುವುದರಿಂದ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚುವರಿಯಾಗಿ 20 ಕೋಟಿ ರೂ. ಅನುದಾನ ನೀಡುವಂತೆ ಲೋಕಸಭಾ ಸ್ಪೀಕರ್ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದರು.

ಪ್ರಧಾನಮಂತ್ರಿ ಪರಿಹಾರ ನಿಧಿ ಯೋಜನೆಯಡಿ ಚಿಕಿತ್ಸೆ ಪಡೆಯುವ ಅರ್ಹ ಫಲಾನುಭವಿಗಳಿಗೆ ಸಂಸದರ ಶಿಫಾರಸು ಪತ್ರದ ಮೂಲಕ ಆರ್ಥಿಕ ನೆರವು ದೊರೆಯಲು ಅವಕಾಶವಿದೆ. ಈ ಸೌಲಭ್ಯದಡಿ ಜಗಳೂರು ತಾಲೂಕಿನ ಸುಮಾರು 50 ಫಲಾನುಭವಿಗಳಿಗೆ ನೆರವು ದೊರಕಿಸಲು ಸಹಕರಿಸಲಾಗಿದೆ ಎಂದು ತಿಳಿಸಿದರು.

ಕೆಪಿಸಿಸಿ ಸದಸ್ಯ ಕಲ್ಲೇಶ್ ರಾಜ್ ಪಾಟೇಲ್ ಮಾತನಾಡಿ, ಚುನಾವಣಾ ಸಂದರ್ಭದಲ್ಲಿ ನೀಡಿದ ಭರವಸೆಯಂತೆ ಸಂಸದರು ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ ಸ್ಪಂದಿಸುತ್ತಿದ್ದಾರೆ. ದತ್ತಿ ಗ್ರಾಮ ಯೋಜನೆಯಡಿ ಪರಿಶಿಷ್ಟ ಪಂಗಡದವರು ಶೇ.100ರಷ್ಟು ವಾಸಿಸುವ ಗ್ರಾಮಗಳನ್ನು ಸಂಪೂರ್ಣವಾಗಿ ಒಳಗೊಳ್ಳುವಂತೆ ಕ್ರಮ ಕೈಗೊಳ್ಳಬೇಕು. ಈಗಾಗಲೇ ಬುಡಕಟ್ಟು ಸಮುದಾಯದ 24 ಗ್ರಾಮಗಳು ಯೋಜನೆಯ ವ್ಯಾಪ್ತಿಯಲ್ಲಿದ್ದು, ಉಳಿದ ಅರ್ಹ ಗ್ರಾಮಗಳನ್ನೂ ಯೋಜನೆಗೆ ಸೇರ್ಪಡೆಗೊಳಿಸಲು ಸಂಬಂಧಪಟ್ಟ ಇಲಾಖೆಗೆ ಸಂಸದರು ಸೂಚನೆ ನೀಡಬೇಕು ಎಂದು ಮನವಿ ಮಾಡಿದರು.

ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಕೆ.ಟಿ. ಬಡಯ್ಯ ಮಾತನಾಡಿ, ಈ ಹಿಂದೆ ಮನರೇಗಾ ಯೋಜನೆಯಡಿ ಚರಂಡಿ, ರಸ್ತೆ ನಿರ್ಮಾಣ ಹಾಗೂ ಕೆರೆಗಳ ಹೂಳೆತ್ತುವ ಕಾಮಗಾರಿಗಳನ್ನು ಕೈಗೊಳ್ಳಲು ಅವಕಾಶವಿತ್ತು. ಆದರೆ ವಿಬಿ–ಜಿ ರಾಮ್ ಜಿ ಯೋಜನೆಯಲ್ಲಿನ ಕಠಿಣ ನಿಯಮಗಳಿಂದ ಗ್ರಾಮೀಣ ಪ್ರದೇಶಗಳ ಅಭಿವೃದ್ಧಿ ಕಾಮಗಾರಿಗಳಿಗೆ ತೊಂದರೆಯಾಗುವ ಆತಂಕವಿದೆ ಎಂದು ಹೇಳಿದರು.

ಗ್ರಾಮದಲ್ಲಿ ಸ್ಮಶಾನದ ಕೊರತೆಯಿದ್ದು, ಸ್ಮಶಾನವನ್ನು ಅಭಿವೃದ್ಧಿಪಡಿಸಬೇಕು. ನಿವೇಶನಗಳಿಲ್ಲದೆ ಬಡ ಕುಟುಂಬಗಳು ತೊಂದರೆ ಅನುಭವಿಸುತ್ತಿದ್ದು, ಅರ್ಹ ಫಲಾನುಭವಿಗಳಿಗೆ ನಿವೇಶನ ಒದಗಿಸಬೇಕು ಎಂದು ಗ್ರಾಮಸ್ಥರು ಸಂಸದರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾಲೆ ಕೆ.ಪಿ. ಪಾಲಯ್ಯ, ಮಾಜಿ ತಾಪಂ ಸದಸ್ಯ ಕಿಲಾರಿ ಸಣ್ಣ, ಪಾಟೇಲ್, ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ್ ಗೌಡ್ರು, ಕಲ್ಲೇಶ್ವರ ದೇವಸ್ಥಾನ ಸಮಿತಿ ಅಧ್ಯಕ್ಷ ಶರಣಪ್ಪ, ಮಾಜಿ ತಾಪಂ ಅಧ್ಯಕ್ಷ ಸಣ್ಣ ಸೂರಯ್ಯ, ಲಕ್ಷ್ಮೀ ಬಸ್ ಮಾಲೀಕ ವೀರಣ್ಣ ಗೌಡ್ರು, ಬಸಾಪುರ ರವಿಚಂದ್ರ, ಗಿರೀಶ್ ಒಡೆಯರ್ ಶಿವನಗೌಡ್ರು, ಹಿರಿಯ ನಾಗರಿಕರ ಸಂಘದ ತಾಲೂಕು ಅಧ್ಯಕ್ಷ ಸಿ. ತಿಪ್ಪೇಸ್ವಾಮಿ, ಕಿಲಾರಿ ಬಡಯ್ಯ, ಪಿಡಿಒ ಹರೀಶ್, ಗ್ರಾಮ



ಶಾಸಕರ ಅನುಪಸ್ಥಿತಿಯಲ್ಲಿ ಸಂಸದರ ಕಾರ್ಯಕ್ರಮ: ರಾಜಕೀಯ ಅಸಮಾಧಾನದ ಚರ್ಚೆ ಮತ್ತೆ ಮುನ್ನೆಲೆಗೆ

"ಮುಂಜಾನೆಯ ಮೆರಗು"

ಜಗಳೂರು ನ, 06– ಕಲ್ಲೇದೇವರಪುರ ಮತ್ತು ಬಸಪ್ಪನಹಟ್ಟಿ ಗ್ರಾಮಗಳಲ್ಲಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಅವರ ನೇತೃತ್ವದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿದ ಕಾರ್ಯಕ್ರಮದಲ್ಲಿ ಸ್ಥಳೀಯ ಶಾಸಕ ಬಿ. ದೇವೇಂದ್ರಪ್ಪ ಅವರ ಅನುಪಸ್ಥಿತಿ ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಈ ಹಿಂದೆ ಜಗಳೂರು ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸದ ವಿಚಾರವಾಗಿ ಶಾಸಕ ಬಿ. ದೇವೇಂದ್ರಪ್ಪ ಅವರು ಸಚಿವರು, ಸಂಸದರು ಹಾಗೂ ಜಿಲ್ಲಾಧಿಕಾರಿಗಳ ವಿರುದ್ಧ ಬಹಿರಂಗವಾಗಿ ಅಸಮಾಧಾನ ವ್ಯಕ್ತಪಡಿಸಿದ್ದರು. ಇದೇ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಕುರಿತು ಶಾಸಕರು ನೀಡಿದ್ದ ಹೇಳಿಕೆಯೂ ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿತ್ತು. ಅಂದಿನಿಂದ ಶಾಸಕರು ಮತ್ತು ಸಂಸದರ ನಡುವಿನ ಸಂಬಂಧದ ಕುರಿತು ಆಗಾಗ್ಗೆ ಚರ್ಚೆಗಳು ನಡೆಯುತ್ತಿವೆ.

ಇದೀಗ ಸಂಸದರ ಕಾರ್ಯಕ್ರಮದಲ್ಲಿ ಶಾಸಕರು ಗೈರಾಗಿರುವುದು ಮತ್ತೊಮ್ಮೆ ರಾಜಕೀಯ ಕುತೂಹಲ ಮೂಡಿಸಿದೆ. ಈ ಕುರಿತು ಸ್ಪಷ್ಟನೆ ನೀಡಿದ ಕೆಪಿಸಿಸಿ ಸದಸ್ಯ ಕಲ್ಲೇಶ್ ರಾಜ್ ಪಾಟೇಲ್, ಶಾಸಕ ಬಿ. ದೇವೇಂದ್ರಪ್ಪ ಅವರು ಬೆಂಗಳೂರಿನಲ್ಲಿ ನಡೆಯುವ ಸಭೆಯಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕಿದ್ದ ಕಾರಣ ಕಾರ್ಯಕ್ರಮಕ್ಕೆ ಹಾಜರಾಗಲು ಸಾಧ್ಯವಾಗಿಲ್ಲ. ಹಾಗಾಗಿ ಅವರ ಅನುಪಸ್ಥಿತಿಯಲ್ಲಿ ಕಾರ್ಯಕ್ರಮ ನಡೆಯುತ್ತಿದೆ ಎಂದು ತಿಳಿಸಿದರು.

ಶಾಸಕರ ಗೈರುಹಾಜರಿಗೆ ಅಧಿಕೃತ ಕಾರಣವನ್ನು ಅವರ ಕಡ್ಡಾಯ ಸಭೆಯ ಹಿನ್ನೆಲೆಯಲ್ಲಿ ಸ್ಪಷ್ಟಪಡಿಸಲಾಗಿದ್ದರೂ, ಹಿಂದಿನ ರಾಜಕೀಯ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಈ ಬೆಳವಣಿಗೆ ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ.

ಪಂಚಾಯಿತಿ ಕಾರ್ಯದರ್ಶಿ ಬಡಯ್ಯ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳೊಂದಿಗೆ ಸಂವಾದ; ಅಡುಗೆ ಕೋಣೆ, ಶೌಚಾಲಯ ಹಾಗೂ ಕಾಂಪೌಂಡ್ ನಿರ್ಮಾಣಕ್ಕೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಭರವಸೆ

"ಮುಂಜಾನೆಯ ಮೆರಗು"

ಜಗಳೂರು, ನ, 06– ತಾಲ್ಲೂಕಿನ ಬಿಳಿಚೋಡು ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಗೆ (ಕೆಪಿಎಸ್) ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಭೇಟಿ ನೀಡಿ ಶಾಲೆಯ ಶೈಕ್ಷಣಿಕ ಚಟುವಟಿಕೆಗಳು ಹಾಗೂ ಮೂಲಸೌಕರ್ಯಗಳನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಪ್ರೌಢಶಾಲೆ ಮತ್ತು ಕಾಲೇಜಿನ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಅವರ ಶೈಕ್ಷಣಿಕ ವಿಚಾರಗಳನ್ನು ಆಲಿಸಿದರು.

ಶಾಲೆಗೆ ಆಗಮಿಸಿದ ಸಂಸದರನ್ನು ವಿದ್ಯಾರ್ಥಿಗಳು ಪುಷ್ಪಗುಚ್ಛ ನೀಡಿ ಆತ್ಮೀಯವಾಗಿ ಸ್ವಾಗತಿಸಿದರು. ಬಳಿಕ ಶಾಲೆಯ ವಿವಿಧ ತರಗತಿ ಕೊಠಡಿಗಳು, ಬಿಸಿಯೂಟದ ಅಡುಗೆ ಕೋಣೆ ಹಾಗೂ ಶೌಚಾಲಯಗಳನ್ನು ವೀಕ್ಷಿಸಿ ಅಲ್ಲಿನ ವ್ಯವಸ್ಥೆಗಳ ಕುರಿತು ಶಿಕ್ಷಕರಿಂದ ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ಶಾಲೆಯ ಅಡುಗೆ ಕೋಣೆ ಚಿಕ್ಕದಾಗಿದ್ದು, ವಿದ್ಯಾರ್ಥಿಗಳಿಗೆ ಅಡುಗೆ ಸಿದ್ಧಪಡಿಸಲು ತೊಂದರೆಯಾಗುತ್ತಿರುವುದನ್ನು ಶಿಕ್ಷಕರು ಗಮನಕ್ಕೆ ತಂದರು. ಇದಕ್ಕೆ ಸ್ಪಂದಿಸಿದ ಸಂಸದರು ಅಡುಗೆ ಕೋಣೆ–ಯ ವಿಸ್ತರಣೆ, ವಿದ್ಯಾರ್ಥಿನಿಯರಿಗಾಗಿ ನೂತನ ಶೌಚಾಲಯ ನಿರ್ಮಾಣ ಹಾಗೂ ಶಾಲೆಯ ಸುತ್ತಲೂ ಕಾಂಪೌಂಡ್ ನಿರ್ಮಿಸಿಕೊಡುವುದಾಗಿ ಭರವಸೆ ನೀಡಿ–ದರು.

ಶಾಲೆಯ ಮೂಲಸೌಕರ್ಯಗಳ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಪರಿಶೀಲನೆ ನಡೆಸಿದ ಅವರು, ವಿದ್ಯಾರ್ಥಿಗಳಿಗೆ ಉತ್ತಮ ಕಲಿಕಾ



ವಾತಾವರಣ ಕಲ್ಪಿಸುವ ಮಹತ್ವವನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಭಾರಿ ಪ್ರಾಂಶುಪಾಲ ಪ್ರಕಾಶ್, ಪ್ರೌಢಶಾಲೆಯ ಮುಖ್ಯಶಿಕ್ಷಕ ಹುಲುಗಪ್ಪ, ಕಾಲೇಜಿನ ಉಪನ್ಯಾಸಕ ಎಚ್. ಹನುಮಂತಪ್ಪ, ಜಿಲ್ಲಾ ಪ್ರೌಢಶಾಲಾ ಸಹಶಿಕ್ಷಕರ ಸಂಘದ ಸಂಘಟನಾ ಕಾರ್ಯದರ್ಶಿ ಎಚ್. ಬಸವರಾಜ್, ಸಹಶಿಕ್ಷಕರಾದ ನಟರಾಜ್, ಪರಶುರಾಮಪ್ಪ, ರಂಗನಾಥ್, ಮಂಜು, ಕೆ. ಶಿವಮೂರ್ತಿ, ರವಿಕುಮಾರ್, ರತ್ನಮಾಲ, ಎಸ್‌ಡಿಎಂಸಿ ಉಪಾಧ್ಯಕ್ಷ ಅಜಾಮುಲ್ಲಾ, ಸದಸ್ಯ ಚಂದ್ರಪ್ಪ, ಗ್ರಾಮದ ಮುಖಂಡ ಗಿರೀಶ್ ಒಡೆಯರ್ ಉಪಸ್ಥಿತರಿದ್ದರು.

ಅಂಗನವಾಡಿ ಕಟ್ಟಡ ಕಾಮಗಾರಿ ಗುಣಮಟ್ಟದಿಂದ ಕೂಡಿರಲಿ: ಸಂಸದೆ ಪ್ರಭಾ ಮಲ್ಲಿಕಾರ್ಜುನ ಸೂಚನೆ

"ಮುಂಜಾನೆಯ ಮೆರಗು"

ಜಗಳೂರು ನ, 06– ತಾಲೂಕಿನ ಕಲ್ಲೇದೇವರಪುರ ಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಅಂಗನವಾಡಿ ಕೇಂದ್ರದ ಕಟ್ಟಡ ಕಾಮಗಾರಿಗೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಈ ಸಂದರ್ಭದಲ್ಲಿ ಕಟ್ಟಡ ಕಾಮಗಾರಿಯ ಪ್ರಗತಿ, ನಿರ್ಮಾಣದ ಗುಣಮಟ್ಟ ಹಾಗೂ ಮಕ್ಕಳಿಗೆ ಕಲ್ಪಿಸಬೇಕಾದ ಮೂಲಸೌಕರ್ಯಗಳ ವ್ಯವಸ್ಥೆ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಅಂಗನವಾಡಿ ಕೇಂದ್ರಗಳು ಗ್ರಾಮೀಣ ಪ್ರದೇಶದ ಮಕ್ಕಳ ಆರೋಗ್ಯ, ಪೌಷ್ಟಿಕತೆ ಹಾಗೂ ಪ್ರಾಥಮಿಕ ಶಿಕ್ಷಣದ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಹೀಗಾಗಿ ನೂತನವಾಗಿ ನಿರ್ಮಾಣವಾಗುತ್ತಿರುವ ಕಟ್ಟಡವನ್ನು ಗುಣಮಟ್ಟದೊಂದಿಗೆ ನಿರ್ಮಿಸಬೇಕು. ಕಾಮಗಾರಿಯಲ್ಲಿ ಯಾವುದೇ ಲೋಪದೋಷಗಳಿಗೆ ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಮಕ್ಕಳು ಸುರಕ್ಷಿತ ಹಾಗೂ ಆಹ್ಲಾದಕರ ವಾತಾವರಣದಲ್ಲಿ ಕಲಿಯಲು ಅನುಕೂಲವಾಗುವಂತೆ ಕಟ್ಟಡ ನಿರ್ಮಾಣವಾಗಬೇಕು. ಕೇಂದ್ರದಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ, ವಿದ್ಯುತ್ ಸಂಪರ್ಕ, ಗಾಳಿ ಮತ್ತು ಬೆಳಕಿನ ವ್ಯವಸ್ಥೆ ಸೇರಿದಂತೆ ಮಕ್ಕಳಿಗೆ ಅಗತ್ಯವಿರುವ ಎಲ್ಲ ಮೂಲಸೌಕರ್ಯಗಳನ್ನು ಸಮರ್ಪಕವಾಗಿ ಕಲ್ಪಿಸಬೇಕು. ಕಾಮಗಾರಿಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಮಕ್ಕಳ ಬಳಕೆಗೆ ಸಿದ್ಧಪಡಿಸುವಂತೆ ತಿಳಿಸಿದರು.

ಮಕ್ಕಳ ಭವಿಷ್ಯದ ದೃಷ್ಟಿಯಿಂದ ಅಂಗನವಾಡಿ ಕೇಂದ್ರಗಳ ಅಭಿವೃದ್ಧಿಗೆ ಆದ್ಯತೆ ನೀಡುವುದು ಅಗತ್ಯ. ಸರ್ಕಾರದಿಂದ ದೊರೆಯುವ ಸೌಲಭ್ಯಗಳು ಅರ್ಹ ಮಕ್ಕಳಿಗೆ ಸಮರ್ಪಕವಾಗಿ ತಲುಪುವಂತೆ ಅಧಿಕಾರಿಗಳು ಕಾಳಜಿ ವಹಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಮಾಗಡಿ ಕೆರೆಗೆ ಹರಿದ ಗಂಗೆ: ಹಾಲಿನ ಅಭಿಷೇಕದ ಮೂಲಕ ಸ್ವಾಗತಿಸಿದ ಗ್ರಾಮಸ್ಥರು

ನ.8ರಂದು 'ಆಧುನಿಕ ಭಗೀರಥರ 57ರ ಸಂಭ್ರಮ' ಆಚರಣೆ: ಶಾಸಕ ಬಿ. ದೇವೇಂದ್ರಪ್ಪ

"ಮುಂಜಾನೆಯ ಮೆರಗು"

ಜಗಳೂರು ನ, 06– ತಾಲೂಕಿನ 57 ಕೆರೆಗಳಿಗೆ ನೀರು ತುಂಬಿಸುವ ಮಹತ್ವಾಕಾಂಕ್ಷಿ ಏತ ನೀರಾವರಿ ಯೋಜನೆಯಡಿ ಕಾನೂನು ಅಡಚಣೆಗಳಿಂದಾಗಿ ಬಾಕಿ ಉಳಿದಿದ್ದ ನಾಲ್ಕು ಕೆರೆಗಳಿಗೂ ಇದೀಗ ನೀರು ಹರಿದಿದ್ದು, ಮಾಗಡಿ ಕೆರೆಗೆ ನೀರು ತಲುಪಿದ ಐತಿಹಾಸಿಕ ಕ್ಷಣಕ್ಕೆ ಶಾಸಕ ಬಿ. ದೇವೇಂದ್ರಪ್ಪ ಸಾಕ್ಷಿಯಾದರು.

ತಾಲೂಕಿನ 57 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯಡಿ ಬಹುತೇಕ ಕೆರೆಗಳಿಗೆ ನೀರು ಹರಿಸಲಾಗಿತ್ತು. ಆದರೆ, ಕಾನೂನು ಸಂಬಂಧಿತ ಅಡಚಣೆಗಳಿಂದಾಗಿ ಮಾಗಡಿ ಸೇರಿದಂತೆ ಉಳಿದ ನಾಲ್ಕು ಕೆರೆಗಳಿಗೆ ನೀರು ಹರಿಸುವ ಕಾರ್ಯ ವಿಳಂಬವಾಗಿತ್ತು. ಇದೀಗ ಎಲ್ಲಾ ಅಡೆತಡೆಗಳು ನಿವಾರಣೆಯಾಗಿ ನಾಲ್ಕೂ ಕೆರೆಗಳಿಗೆ ನೀರು ತಲುಪಿರುವುದು



ಗ್ರಾಮಸ್ಥರಲ್ಲಿ ಹರ್ಷ ಮೂಡಿಸಿದೆ.

ಮಾಗಡಿ ಕೆರೆಗೆ ನೀರು ಹರಿದು ಬಂದ ಸಂಭ್ರಮದಲ್ಲಿ ಶಾಸಕ ಬಿ. ದೇವೇಂದ್ರಪ್ಪ ಅವರು ಗ್ರಾಮಸ್ಥರೊಂದಿಗೆ ಪಾಲ್ಗೊಂಡು, ನೀರಿಗೆ ಹಾಲಿನ ಅಭಿಷೇಕ ಮಾಡುವ ಮೂಲಕ ಗಂಗೆಯನ್ನು ಆತ್ಮೀಯವಾಗಿ ಸ್ವಾಗತಿಸಿದರು. ಬಳಿಕ ಮಾಗಡಿ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ಗ್ರಾಮಸ್ಥರನ್ನು ಉದ್ದೇಶಿಸಿ ಮಾತನಾಡಿದ ಅವರು, ಇದೇ ನವೆಂಬರ್ 8ರಂದು ಈ ಐತಿಹಾಸಿಕ ಕ್ಷಣವನ್ನು ಅದ್ಧೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ. ಈ ಕಾರ್ಯಕ್ರಮಕ್ಕೆ ಆಧುನಿಕ ಭಗೀರಥರೆಂದೇ ಖ್ಯಾತಿ ಪಡೆದಿರುವ ಸಿರಿಗೆರೆ ಶ್ರೀಗಳು ಆಗಮಿಸಿ ನಮ್ಮೊಂದಿಗೆ ಸಂಭ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

'ಆಧುನಿಕ ಭಗೀರಥರ 57ರ ಸಂಭ್ರಮ' ಎಂಬ ಹೆಸರಿನಲ್ಲಿ ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು, ತಾಲೂಕಿನ ಜನರ ಬಹುದಿನಗಳ ಕನಸಾದ 57 ಕೆರೆಗಳಿಗೆ ನೀರು ಹರಿಸುವ ಯೋಜನೆಯ ಯಶಸ್ಸನ್ನು ಸಂಭ್ರಮದಿ